# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 67 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 12–09–2023 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 01 Issue - 67 | Title- Code: KARKAN 28269 | Chitradurga | Date: 12-09-2023 Tuesday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಲೋಕದಾಲತ್ 4,224 ಪ್ರಕರಣ ರಾಜಿ ಸಂಧಾನದ ಮೂಲಕ ಮುಕ್ತಾಯ 2

ಭಕ್ತರ ಇಷ್ಟಾರ್ಥ ತಪ್ಪದೆ ನೆರವೇರಿಸುವ ಮಹಾನ್ ದೈವ ಶಕ್ತಿ ಶ್ರೀಕೃಷ್ಣ ಪರಮಾತ್ಮ 3

ಪತ್ರಕರ್ತರ ಸಮಸ್ಯೆಗೆ ಪರಿಹಾರ ಒದಗಿಸಲು ಸರ್ಕಾರಕ್ಕೆ ಮನವಿ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಫ್ರೀಡಂಪಾರ್ಕ್ ತಲುಪಿದ ಖಾಸಗಿ ವಾಹನ ಸಂಘಟನೆ

ಬೆಂಗಳೂರು: ಖಾಸಗಿ ಸಾರಿಗೆ ಒಕ್ಕೂಟದ ಮುಷ್ಕರ ರಾಯಣ್ಣ ರೈಲ್ವೆ ನಿಲ್ದಾಣದಿಂದ ಆರಂಭವಾಗಿದ್ದು, ಹಲವು ಖಾಸಗಿ ವಾಹನ ಸಂಘಟನೆಗಳು ಫ್ರೀಡಂಪಾರ್ಕ್ ತಲುಪಿವೆ. ಫ್ರೀಡಂಪಾರ್ಕ್‌ನಲ್ಲಿ ಖಾಸಗಿ ವಾಹನ ಸಂಘಟನೆ ಸದಸ್ಯರು ಪ್ರತಿಭಟನೆ ಮಾಡುತ್ತಿದ್ದಾರೆ.

### ಶಕ್ತಿ ಯೋಜನೆಯಿಂದ ಆದ ನಷ್ಟಕ್ಕೆ ಪರಿಹಾರ ಕೊಡಲು ಸಾಧ್ಯವಿಲ್ಲ; ರಾಮಲಿಂಗಾ ರೆಡ್ಡಿ

ಬೆಂಗಳೂರು: ಸಾರಿಗೆ ಸಂಸ್ಥೆಗಳ ಬೇಡಿಕೆ ಎಲ್ಲವೂ ಈಗಿನದ್ದಲ್ಲ. ಕಳೆದ ನಾಲ್ಕೈದು ವರ್ಷಗಳ ಹಳೆಯ ಬೇಡಿಕೆಗಳು ಅವು. ಟ್ಯಾಕ್ಸ್ ಹೆಚ್ಚಳ ಮತ್ತು ಶಕ್ತಿ ಯೋಜನೆ ಮಾತ್ರ ನಮ್ಮ ಸರ್ಕಾರ ಬಂದ ಮೇಲೆ ಆಗಿರುವುದು. ಮುಖ್ಯಮಂತ್ರಿಗಳು ಸಭೆ ಕರೆದಾಗ ಸಾರಿಗೆ ಸಂಘಗಳು ಬರಲಿಲ್ಲ. ಕಾನೂನಾತ್ಮಕವಾಗಿ ಏನು ಈಡೇರಿಸಲು ಸಾಧ್ಯ ಈಡೇರಿಸುತ್ತೇವೆ. ಸಾರಿಗೆ ಚಾಲಕರ ಪರವಾಗಿಯೇ ನಾನು ಇರುವವನು. ಶಕ್ತಿ ಯೋಜನೆಯಿಂದ ನಷ್ಟ ಆಗಿದೆ ಪರಿಹಾರ ಕೊಡಿ ಅಂತಿದ್ದಾರೆ. ಅದು ಪ್ರಾಯೋಗಿಕವಾಗಿ ಸಾಧ್ಯವಿಲ್ಲ. ನಮ್ಮ ಶಕ್ತಿ ಯೋಜನೆ ಇರುವುದೇ ಬಜೆಟ್ ನಲ್ಲಿ 2500 ಕೋಟಿ ಡಿಗ. ಸಾರಿಗೆ ಚಾಲಕರು 3 ಲಕ್ಷ ಮಂದಿ ಇದ್ದಾರೆ. ಅವರ ಬೇಡಿಕೆ ಪ್ರಕಾರ ಪರಿಹಾರ ಕೊಟ್ಟರೇ ಅದೆ 5009 ಕೋಟಿ ರೂ. ಆಗುತ್ತದೆ. ಇದನ್ನು ಈಡೇರಿಸಲು ಸಾಧ್ಯಾನಾ ? ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಪ್ರಶ್ನಿಸಿದರು.

### ಮಡಿವಾಳದಿಂದ ಹೊರಟ ಖಾಸಗಿ ವಾಹನ ಚಾಲಕರ ರ‍್ಯಾಲಿ

ಬೆಂಗಳೂರು: ನಗರದಲ್ಲಿ ಖಾಸಗಿ ಸಾರಿಗೆ ಒಕ್ಕೂಟದಿಂದ ಮುಷ್ಕರ ನಡೆಯುತ್ತಿದ್ದು, ಮಡಿವಾಳದಿಂದ ಖಾಸಗಿ ವಾಹನ ಚಾಲಕರು ರ‍್ಯಾಲಿ ಹೊರಟಿದ್ದಾರೆ. ವಿವಿಧ ಬೇಡಿಕೆ ಈಡೇರಿಸುವಂತೆ ಆಟೋ ಚಾಲಕರು ಪ್ರತಿಭಟನೆ ಮಾಡುತ್ತಿದ್ದಾರೆ. ಮಡಿವಾಳದಿಂದ ಫ್ರೀಡಂಪಾರ್ಕ್ ವರೆಗೆ ಪ್ರತಿಭಟನೆ ನಡೆಸಲಿದ್ದಾರೆ.

### ಗಡಿಭಾಗದಲ್ಲಿ ವಾಹನ ತಡೆ ಹಿಡಿಯುತ್ತಿದ್ದವರನ್ನ ಚದುರಿಸಿದ ಪೋಲೀಸರು

ಆನೆಕಲ್: ಅತ್ತಿಬೆಲೆ ಗಡಿಭಾಗದಲ್ಲಿ ವಾಹನಗಳನ್ನ ತಡೆದು ವಾಪಸ್ ಕಳುಹಿಸುತ್ತಿದ್ದ ಪ್ರತಿಭಟನಾಕಾರರನ್ನು ಪೋಲೀಸರು ಚದುರಿಸಿದ್ದಾರೆ. ಈ ವೇಳೆ ಪ್ರತಿಭಟನಾಕಾರರು ಹಾಗೂ ಪೋಲೀಸರ ನಡುವೆ ಮಾತಿನ ಚಕಮಕಿ ನಡೆಯಿತು. ವಾಹನಗಳನ್ನು ತಡೆದರೇ ಕೇಸ್ ಮಾಡುವುದಾಗಿ ವಾರ್ನಿಂಗ್ ಮಾಡಿದರು.

### ಬೆಂಗಳೂರು-ಹೊಸೂರು ರಸ್ತೆಯಲ್ಲಿ ಎಂದಿನಂತೆ ವಾಹನ ಓಡಾಟ

ಬೆಂಗಳೂರು: ಖಾಸಗಿ ಸಾರಿಗೆ ಒಕ್ಕೂಟದಿಂದ ಬೆಂಗಳೂರು ಬಂದ್ ಇದ್ದರೂ ಬೆಂಗಳೂರು–ಹೊಸೂರು ಮುಖ್ಯ ರಸ್ತೆಯಲ್ಲಿ ಎಂದಿನಂತೆ ವಾಹನಗಳ ಓಡಾಟ ನಡೆಯುತ್ತಿದೆ. ಎಲೆಕ್ಟ್ರಾನಿಕ್ ಸಿಟಿ ಸಮೀಪದ ಬೊಮ್ಮಸಂದ್ರದಲ್ಲಿ ಖಾಸಗಿ ವಾಹನಗಳ ಸಂಚರಿಸುತ್ತಿವೆ.

### ಕೆಎಸ್‌ಟಿಡಿಸಿ ಟ್ಯಾಕ್ಸಿ ಓಡಾಟ ಹಿನ್ನಲೆ ಕಾರ್‌ಗೆ ಕಲ್ಲು ತೂರಿದ ಕಿಡಿಗೇಡಿ

ಬೆಂಗಳೂರು: ಕೆಎಸ್‌ಟಿಡಿಸಿ ಟ್ಯಾಕ್ಸಿ ಓಡಾಟ ಹಿನ್ನಲೆಯಲ್ಲಿ ಕಾರ್‌ಗೆ ಕಿಡಿಗೇಡಿಗಳು ಕಲ್ಲು ತೂರಿದ್ದಾರೆ. ಏರ್ಪೋರ್ಟ್ ರಸ್ತೆಯ ಚಿಕ್ಕಜಾಲ ಬಳಿ ತಡರಾತ್ರಿ ಘಟನೆ ನಡೆದಿದೆ. ಖಾಸಗಿ ಸಾರಿಗೆ ಒಕ್ಕೂಟ ಪ್ರತಿಭಟನೆ ಹಿನ್ನಲೆಯಲ್ಲಿ ಪ್ರಯಾಣಿಕರನ್ನು ಕರೆದೊಯ್ಯುತ್ತಿದ್ದ ಕಾರಿಗೆ ಕಲ್ಲು ತೂರಲಾಗಿದೆ. ಕಲ್ಲು ತೂರಿದ ಹಿನ್ನೆಲೆಯಲ್ಲಿ ಕಾರಿನ ಗ್ಲಾಸ್ ಪುಡಿಪುಡಿಯಾಗಿದೆ. ಸದ್ಯ ಚಿಕ್ಕಜಾಲ ಪೋಲೀಸರು ಆರೋಪಿಯನ್ನು ವಶಕ್ಕೆ ಪಡೆದಿದ್ದಾರೆ.

# ಶಾಲೆಗಳಲ್ಲಿ ಗಿಡ ನೆಟ್ಟು ಪೋಷಿಸುವ ಕಾರ್ಯ ನಿರಂತರವಾಗಿರಲಿ: ಶಾಸಕ ಟಿ.ರಘುಮೂರ್ತಿ

» **ಚಳ್ಳಕೆರೆ**

ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ನೀಡುವ ಜೊತೆಗೆ ಪರಿಸರ ಜಾಗೃತಿ ಮೂಡಿಸುವ ಕಾರ್ಯಕ್ರಮವನ್ನೂ ಸಹ ಹಮ್ಮಿಕೊಳ್ಳಲಾಗಿದ್ದು, ವಿದ್ಯಾರ್ಥಿಗಳು ನೈಸರ್ಗಿಕ ಸಂಪತ್ತನ್ನು ಸಂರಕ್ಷಣೆ ಮಾಡುವ ಬಗ್ಗೆ ಜಾಗೃತರಾಗಬೇಕೆಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ತಾಲ್ಲೂಕಿನ ಕೆಂಚವೀರನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಶಿಕ್ಷಣ ಇಲಾಖೆ ಮತ್ತು ಸಾಮಾಜಿಕ ವಲಯ ಅರಣ್ಯಾಧಿಕಾರಿಗಳ ಸಹಯೋಗದಲ್ಲಿ ಸಸ್ಯ ಶ್ಯಾಮಲ ಕಾರ್ಯಕ್ರಮವನ್ನು ಗಿಡ ನೆಡುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಗ್ರಾಮೀಣ ಭಾಗಗಳ ಸರ್ಕಾರಿ ಶಾಲೆಯ ಆವರಣದಲ್ಲಿ ವಿಶಾಲವಾದ ಮೈದಾನವಿರುತ್ತವೆ, ಸಾಮಾಜಿಕ ಅರಣ್ಯ ಇಲಾಖೆವತಿಯಿಂದಶಾಲೆಗಳಿಗೆಗಿಡಗಳನ್ನು ನೀಡಲಾಗುತ್ತದೆ. ಶಾಲೆಯ ಆಡಳಿತ ಮಂಡಳಿ ಅರಣ್ಯ ಇಲಾಖೆಯಿಂದ ಗಿಡ





ಪಡೆದು ಮಕ್ಕಳಿಂದಲೇ ಶಾಲಾ ಆವರಣದಲ್ಲಿ ಗಿಡಗಳನ್ನು ನೆಟ್ಟು ಪೋಷಿಸುವ ಕಾರ್ಯ ಮಾಡಬೇಕು. ವಿದ್ಯಾರ್ಥಿಗಳು ಸಹ ಇಂತಹ ಕಾರ್ಯಕ್ರಮಗಳಲ್ಲಿ ಹೆಚ್ಚು ಆಸಕ್ತಿಯಿಂದ ಭಾಗವಹಿಸಿ. ವಿದ್ಯಾರ್ಥಿಗಳು ಹಾಕಿದ ಗಿಡ ಮುಂದಿನ ದಿನಗಳಲ್ಲಿ ಎಮ್ಮರವಾಗಿ ಬೆಳೆದು ಎಲ್ಲರಿಗೂ ಉಪಯೋಗವಾಗಲಿದೆ. ವಿದ್ಯಾರ್ಥಿಗಳು ಸಹ ತಾವು ನೆಟ್ಟ ಗಿಡದ ಬಗ್ಗೆ ಹೆಚ್ಚು ವಿಶ್ವಾಸ ಹೊಂದಿರುತ್ತಾರೆ. ಈ ಕಾರ್ಯಕ್ರಮ ನಿರಂತರವಾಗಿ ನಡೆಯಲಿ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಮಾತನಾಡಿ, ನಗರ ಹಾಗೂ ಗ್ರಾಮೀಣ ಭಾಗಗಳ ಸರ್ಕಾರಿ ಶಾಲೆಗಳ ಆವರಣದಲ್ಲಿ ಸಾಮಾಜಿಕ ಅರಣ್ಯ ಇಲಾಖೆ ಅಧಿಕಾರಗಳ ಸಮ್ಮುಖದಲ್ಲಿ ಗಿಡ ನೆಡುವ ಕಾರ್ಯಕ್ಕೆ ಇಂದಿನಿಂದ ಚಾಲನೆ ದೊರಕಿದೆ. ಸಸ್ಯ ಶ್ಯಾಮಲ ಕಾರ್ಯಕ್ರಮವನ್ನು ತಾಲ್ಲೂಕಿನ ಎಲ್ಲಾ ಶಾಲೆಗಳಲ್ಲಿ ಹಮ್ಮಿಕೊಳ್ಳಲು ನಿರ್ಧರಿಸಿದೆ. ಶಾಲೆಯ ಶಿಕ್ಷಕ ವರ್ಗ, ಆಡಳಿತ ಮಂಡಳಿ ಸದಸ್ಯರು ಮಕ್ಕಳಿಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಇಂತಹ ಕಾರ್ಯಕ್ರಮಗಳಿಗೆ ಹೆಚ್ಚು ಉತ್ತೇಜನ ನೀಡಬೇಕು ಎಂದರು. ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷ ವೆಂಕಟೇಶ್, ಸದಸ್ಯರಾದ ಓಂಕಾರಪ್ಪ, ಹನುಮಂತಪ್ಪ, ತಿಪ್ಪಮ್ಮ, ದೇವರಾಜು ಮುಖಂಡರಾದ ಮಹಂತೇಶ್, ವಿಶ್ವನಾಥ, ಬಸವರಾಜಪ್ಪ, ಶೇಕರಪ್ಪ, ರಾಜಣ್ಣ, ಅಶೋಕ್, ಸಾಮಾಜಿಕ ಅರಣ್ಯ ಇಲಾಖೆ ಅಧಿಕಾರಿ ಬಾಬು, ನಗರಸಭಾ ಸದಸ್ಯ ಬಿ.ಟಿ.ರಮೇಶ್‌ಗೌಡ, ಮುಖ್ಯ ಶಿಕ್ಷಕ ಬಿ.ಜಿ.ನಾಗರಾಜು ಶಿಕ್ಷಕರಾದ ಕೆಂಚವೀರನಹಳ್ಳಿ ಮಲ್ಲೇಶ್, ಎಂ.ಪಿ.ರಾಜಶೇಖರ್, ಬಸವರಾಜು, ಎಸ್‌ಡಿಎಂಸಿ ಅಧ್ಯಕ್ಷ ಕೆ.ಟಿ.ಸಂಪತ್‌ಕುಮಾರ್, ಉಪಸ್ಥಿತರಿದ್ದರು.

# ಸಚಿವ ಡಿ.ಸುಧಾಕರ್ ವಿರುದ್ಧ ಭೂ ಕಬಳಿಕೆ ಜಾತಿ ನಿಂದನೆ ಆರೋಪ: ಎಫ್‌ಐಆರ್..!!

» **ಬೆಂಗಳೂರು**

ಭೂ ಕಬಳಿಕೆ, ಹಲ್ಲೆ ಹಾಗೂ ಜಾತಿ ನಿಂದನೆ ಆರೋಪ ಅಡಿಯಲ್ಲಿ ಯೋಜನೆ ಹಾಗೂ ಸಾಂಖ್ಯಿಕ ಖಾತೆ ಸಚಿವ ಡಿ.ಸುಧಾಕರ್ ಅವರ ವಿರುದ್ಧ ದೂರು ದಾಖಲಾಗಿದೆ.



ನಗರದ ಯಲಹಂಕ ಪೊಲೀಸ್ ಠಾಣೆಯಲ್ಲಿ ದೂರು ಪ್ರಕರಣ ದಾಖಲಿಸಲಾಗಿದ್ದು, ಸುಬ್ಬಮ್ಮ ಎಂಬುವರು ದೂರುದಾರರಾಗಿದ್ದಾರೆ. ದೂರು ಆಧರಿಸಿ ಸಚಿವ ಡಿ.ಸುಧಾಕರ್, ಶ್ರೀನಿವಾಸ್ ಮತ್ತು ಭಾಗ್ಯಮ್ಮ ಎಂಬುವರ ವಿರುದ್ಧ ದಲಿತರ ಮೇಲೆ ದೌರ್ಜನ್ಯ, ವಂಚನೆ, ಹಲ್ಲೆ ಹಾಗೂ ಜಾತಿ ನಿಂದನೆ ಪ್ರಕರಣ ದಾಖಲಿಸಲಾಗಿದೆ. ಪ್ರಕರಣದಲ್ಲಿ ಸುಧಾಕರ್ ಅವರನ್ನು ಎರಡನೇ ಆರೋಪಿಯನ್ನಾಗಿ ಮಾಡಲಾಗಿದೆ.

ಸೆವೆನ್ ಹಿಲ್ಸ್ ಡೆವಲಪರ್ಸ್ ಮತ್ತು ಟ್ರೇಡರ್ಸ್ ಕಂಪೆನಿಯ ಪಾಲುದಾರರಾದ ಸಚಿವ ಸುಧಾಕರ್ ಅವರು ಯಲಹಂಕ ಗ್ರಾಮದ ಸರ್ವೆ ನಂ. 108/1ರ ಜಮೀನನ್ನು ಮೋಸದಿಂದ ಕಬಳಿಸಿದ್ದಾರೆ. ಈ ಜಮೀನಿನ ವಿವಾದ ಕೋರ್ಟ್‌ನಲ್ಲಿ ಬಾಕಿಯಿದ್ದರೂ, ಸಚಿವರು ಗುಂಪು ಕಟ್ಟಿಕೊಂಡು ಬಂದು ದೌರ್ಜನ್ಯ ಎಸಗಿದ್ದಾರೆ. ಮನೆಯಲ್ಲಿದ್ದ ತಮ್ಮ ಮಗಳ ಮೇಲೆ ಹಲ್ಲೆ ನಡೆಸಲಾಗಿದೆ.

ಕುಟುಂಬದ ಮಹಿಳೆಯರನ್ನು ಹೊರಹಾಕಿ ಜೆಸಿಬಿ ಯಂತ್ರ ಬಳಸಿ ಮನೆಯನ್ನು ಕೆಡವಲಾಗಿದೆ ಎಂದು ಸುಬ್ಬಮ್ಮ ಪೊಲೀಸರಿಗೆ ನೀಡಿರುವ ದೂರಿನಲ್ಲಿ ಆರೋಪಿಸಿದ್ದಾರೆ.

ಸೆವೆನ್ ಹಿಲ್ಸ್ ಡೆವಲಪರ್ಸ್ ಮತ್ತು ಟ್ರೇಡರ್ಸ್ ಆಸ್ತಿಗೆ 11 ಮಂದಿ ಅತಿಕ್ರಮ ಪ್ರವೇಶ ಮಾಡಿದ್ದಾರೆ ಎಂದು ಆರೋಪಿಸಿ ಸುಧಾಕರ್ ಅವರ ಪುತ್ರ ಸುಹಾಸ್ ಪೊಲೀಸ್ ದೂರು ನೀಡಿದ ಒಂದು ದಿನದ ನಂತರ ಈ ಪ್ರಕರಣ ನಡೆದಿದೆ.

# ಕಾಯಕ ನಂಬಿರುವ ಮಡಿವಾಳ ಸಮುದಾಯ



■ **ದಾವಣಗೆರೆ**

ಮಡಿವಾಳಸಮುದಾಯಸಣ್ಣಸಮುದಾಯವಾದರೂ ಸಹ ಜನರ ಬಟ್ಟೆಗಳನ್ನು ಶುಭ್ರ ಮಾಡುವಂತಹ ಸ್ವಚ್ಛ ಸಮಾಜ. ಕಾಯಕವೇ ಪ್ರಧಾನವಾದ ಸಮಾಜ ಇದಾಗಿದೆ ಎಂದು ಸಂಸದ ಡಾ.ಜಿ.ಎಂ.ಸಿದ್ದೇಶ್ವರ್ ತಿಳಿಸಿದರು.

ಇಲ್ಲಿನ ವಿನೋಬ ನಗರದಲ್ಲಿರುವ ಶ್ರೀಮಾಚಿದೇವ ಸಮುದಾಯ ಭವನದಲ್ಲಿ ಜಿಲ್ಲಾ ಶ್ರೀಮಡಿವಾಳ ಮಾಚಿದೇವ ಸಂಘ, ಮಹಿಳಾ ಸಂಘ ಹಾಗೂ ಮಡಿಕಟ್ಟೆ ಸಮಿತಿ ಇವರ ವತಿಯಿಂದ ಆಯೋಜಿಸಲಾಗಿದ್ದ ಶ್ರೀ ಮಡಿವಾಳ ಮಾಚಿದೇವರ ಶ್ರಾವಣ ಮಾಸದ ಸ್ಮರಣೋತ್ಸವ ಕಾರ್ಯಕ್ರಮ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಬಟ್ಟೆಗಳನ್ನು ಶುಭ್ರ ಮಾಡುವ ಮಡಿವಾಳ ಸಮುದಾಯ ಒಂದು ವೇಳೆ ಇರಲಿಲ್ಲ ಎನ್ನುವಂತೆ ಆಗಿದ್ದರೆ ನಾವೆಲ್ಲರೂ ಯಾರ ರೀತಿ ಇರುತ್ತಿದ್ದೆವು ಎನ್ನುವುದನ್ನೂ ಊಹಿಸಲು ಸಾಧ್ಯವಿಲ್ಲ. ಬಟ್ಟೆಗಳನ್ನು ಶುಭ್ರ ಮಾಡುವ ಜೊತೆ ಶೈಕ್ಷಣಿಕವಾಗಿ ಮುಂದೆ ಬರಬೇಕೆಂದು ಸಲಹೆ ನೀಡಿದರು.

ಸಮುದಾಯದಲ್ಲಿ ಪೋಷಕರು ತಮ್ಮ ಮಕ್ಕಳಿಗೆ ಶಿಕ್ಷಣ ಕೊಡಿಸಿ. ಶಿಕ್ಷಣವಿದ್ದರೆ ಯಾವುದೇ ಕ್ಷೇತ್ರದಲ್ಲಿ ಸಾಧನೆ ಮಾಡಬಹುದು. ದುಡ್ಡೇ ದೊಡ್ಡಪ್ಪ ಎನ್ನುತ್ತಾರೆ. ಆದರೆ ವಿದ್ಯೆ ಅವರಪ್ಪ. ಕಾರಣ ಸರ್ಕಾರದಿಂದ ಸಿಗುವ ಸೌಲಭ್ಯಗಳ ಸದುಪಯೋಗ ಮಾಡಿಕೊಂಡು ಉತ್ತಮ ವಿದ್ಯೆ ಕಲಿತರೆ ಉನ್ನತ ಸ್ಥಾನಗಳಿಗೆ ಏರಬಹುದು. ಆ ಮೂಲಕ ಸಮುದಾಯಕ್ಕೆ ಮಾತ್ರವಲ್ಲದೇ ರಾಜ್ಯ, ದೇಶಕ್ಕೆ ದೊಡ್ಡ ಕೊಡುಗೆ ನೀಡಿದಂತೆ ಆಗುತ್ತದೆ ಎಂದು ಹೇಳಿದರು.

## ಇಂದು ವಿದ್ಯುತ್ ಹಲವೆಡೆ ವ್ಯತ್ಯಯ

**ಚಿತ್ರದುರ್ಗ:** 220 ಕೆ.ವಿ.ಎ ಎಸ್.ಆರ್.ಎಸ್, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದವರು ಚಿತ್ರದುರ್ಗ ವಿಭಾಗ ವ್ಯಾಪ್ತಿಯಲ್ಲಿರುವ 220/66/11 ಕೆ.ವಿ. ಚಿತ್ರದುರ್ಗ, 66/11 ಕೆ.ವಿ. ಚಿತ್ರದುರ್ಗದ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತ್ರೈಮಾಸಿಕ ನಿರ್ವಹಣಾ ಕಾರ್ಯಕ್ಕಾಗಿ ವಿದ್ಯುತ್ ವಿತರಣಾ ಕೇಂದ್ರಗಳಿಗೆ ಮಾರ್ಗ ಮುಕ್ತತೆ ನೀಡಬೇಕಾಗಿರುವುದರಿಂದ. ಈ ವಿದ್ಯುತ್ ವಿತರಣಾ ಕೇಂದ್ರಗಳಿಂದ ವಿದ್ಯುತ್ ಸರಬರಾಜಾಗುವ ಎಲ್ಲಾ ಎನ್.ಜೆ.ವೈ ಮತ್ತು ಕೃಷಿ 11 ಕೆ.ವಿ ಮಾರ್ಗಗಳಲ್ಲಿ ಇದೇ ಸೆಪ್ಟೆಂಬರ್ 12ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.

**ಪ್ರಮುಖ ಸುದ್ದಿ**

# ರಾಜ್ಯಾದ್ಯಂತ ಎಲ್ಲಾ ಸೇರೋಣ ಬನ್ನಿ, ಮಾತಾಡೋಣ ಸಂವಾದ

» **ಚಿತ್ರದುರ್ಗ**

ಎಲ್ಲಾ ಸೇರೋಣ ಬನ್ನಿ ಮಾತಾಡೋಣ ಸಂವಾದದ ಮೂಲಕ ರಾಜ್ಯಾದ್ಯಂತ ಸಂಚರಿಸಿ ಜನಜಾಗೃತಿಗೊಳಿಸಲಾಗುವುದೆಂದು ಆಮ್ ಆದ್ಮಿ ಪಕ್ಷದ ರಾಜ್ಯಾಧ್ಯಕ್ಷ ನಟ ಮುಖ್ಯಮಂತ್ರಿ ಚಂದ್ರು ಹೇಳಿದರು.



ಪತ್ರಕರ್ತರ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಕಾಂಗ್ರೆಸ್, ಬಿಜೆಪಿ, ಜೆಡಿಎಸ್. ಮೂರು ಪ್ರಬಲ ಪಕ್ಷಗಳ ಜೊತೆ ನಮ್ಮ ಪಕ್ಷ ಪೈಪೋಟಿ ನೀಡಬೇಕಾಗಿದೆ. ಸಿನಿಮಾ ಮೂಲಕ ಪರಿಚಿತನಾಗಿರುವ ನಾನು ದೊಡ್ಡ ರಾಜಕಾರಣಿಯಲ್ಲ. ಅದಕ್ಕಾಗಿ ಜನಸಾಮಾನ್ಯರ ಮಧ್ಯೆ ಹೋಗಿ ಅವರ ಸಮಸ್ಯೆಗಳನ್ನು ಆಲಿಸಿ ಉಚಿತವಾಗಿ ಸದಸ್ಯತ್ವ ಅಭಿಯಾನ ನಡೆಸಲಾಗುವುದು. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ವಿಧಾನಸಭಾ ಚುನಾವಣಾ ಪೂರ್ವದಲ್ಲಿಯೇ ಘೋಷಿಸಿರುವ ಐದು ಉಚಿತ ಗ್ಯಾರೆಂಟಿಗಳು ನಮ್ಮ ಪ್ರಣಾಳಿಕೆಯಾಗಿತ್ತು. ಅದನ್ನು ಕದ್ದು ಈಗ ರಾಜ್ಯದ ಜನತೆಗೆ ನೀಡುತ್ತಿದ್ದಾರೆ. ಅದಕ್ಕೆ ನಮ್ಮದೇನು ಅಭ್ಯಂತರವಿಲ್ಲ. ಯಾವ ಪಕ್ಷ ಜನತೆಗೆ ಒಳ್ಳೆಯದು ಮಾಡಿದರೂ ನಮಗೆ ಸಂತೋಷ. ಗ್ಯಾರೆಂಟಿಗಳನ್ನು ಘೋಷಿಸುವ ಮುನ್ನ ಸಾಧಕ–ಬಾಧಕಗಳನ್ನು ಗಮನಿಸಿ ಜಾರಿಗೊಳಿಸಬೇಕಿತ್ತು. ಅದಕ್ಕಾಗಿ ಊರೂರಿಗೆ ಹೋಗಿ ಜನರ ಜೊತೆ ಚರ್ಚಿಸಿ ದೆಹಲಿ ಮುಖ್ಯಮಂತ್ರಿ ಅರವಿಂದ ಕ್ರೇಜಿವಾಲರವರ ಸಾಧನೆಗಳನ್ನು ರಾಜ್ಯದ ಜನರಿಗೆ ತಿಳಿಸುವುದು ನಮ್ಮ ಉದ್ದೇಶ ಎಂದರು.

ರಾಜ್ಯದಲ್ಲಿ ಎಲ್ಲಾ ಮಹಿಳೆಯರಿಗೂ ಗೃಹಲಕ್ಷ್ಮಿ ಯೋಜನೆಯಡಿ ಹಣ ತಲುಪಿಲ್ಲ. ಹಣಕಾಸಿನ ವ್ಯವಸ್ಥೆ, ತಾಂತ್ರಿಕ ಸಮಸ್ಯೆಗಳನ್ನು ಮೊದಲು ಸರಿಪಡಿಸಿಕೊಳ್ಳಬೇಕಿತ್ತು. ಸಮಾಜ ಕಲ್ಯಾಣ ಇಲಾಖೆಗೆ 34 ಸಾವಿರ ಕೋಟಿ ರೂ.ಗಳನ್ನು ಮೀಸಲಿಟ್ಟಿರುವ ಹಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹನ್ನೊಂದು ಸಾವಿರ ಕೋಟಿ ರೂ.ಗಳನ್ನು ತೆಗೆದು ಉಚಿತ ಯೋಜನೆಗಳಿಗೆ ನೀಡಿರುವುದು ಕಣ್ಣೊರೆಸುವ ತಂತ್ರ. ಹದಿನಾಲ್ಕು ಅಕಾಡೆಮಿ, ನಾಲ್ಕು ಅಭಿವೃದ್ಧಿ ಪ್ರಾಧಿಕಾರಗಳಿಗೆ ಹತ್ತು ಪೈಸೆ ದುಡ್ಡು ಕೊಟ್ಟಿಲ್ಲ. ನುಡಿಯದಂತೆ ನಡೆಯದಿರುವುದು, ಸುಳ್ಳು ಹೇಳುವುದೇ ಕಾಂಗ್ರೆಸ್ ಸಾಧನೆ ಎಂದು ವ್ಯಂಗ್ಯವಾಡಿದರು.

ಯಾವ ಪ್ರಗತಿಯೂ ಇಲ್ಲ. ಅಭಿವೃದ್ಧಿಯೂ ಇಲ್ಲ. ಉಚಿತ ಐದು ಗ್ಯಾರೆಂಟಿಗಳನ್ನು ಮುಚ್ಚಿಕೊಳ್ಳಲು ಅಲ್ಲಲ್ಲಿ ಕಿತ್ತು ಹಣ ಕೊಡುತ್ತಿದ್ದಾರೆ. ಅಕಾಡೆಮಿ ಹಾಗೂ ಅಭಿವೃದ್ಧಿ ಪ್ರಾಧಿಕಾರಗಳಿಗೆ ಹದಿನೈದು ದಿನದಲ್ಲಿ ನೇಮಕ ಮಾಡಿ ಹಣ ಬಿಡುಗಡೆಗೊಳಿಸದಿದ್ದರೆ ಆಮ್ ಆದ್ಮಿಯಿಂದ ಹೋರಾಟ ಹಮ್ಮಿಕೊಳ್ಳಲಾಗುವುದೆಂದು ಎಚ್ಚರಿಸಿದ ಮುಖ್ಯಮಂತ್ರಿ ಚಂದ್ರು ರಾಜ್ಯದಲ್ಲಿ ರಂಗಮಂದಿರಗಳು ಸೋರುತ್ತಿವೆ. ರಾಜ್ಯದಲ್ಲಿರುವುದು ಬಣ್ಣದ ಕಣ್ಣೊರೆಸುವ ಸರ್ಕಾರ. ತಾಲ್ಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿ, ಪಾರ್ಲಿಮೆಂಟ್ ಹಾಗೂ ಮಹಾನಗರಪಾಲಿಕೆ ಚುನಾವಣೆಗಳು ಯಾವಾಗ ಬೇಕಾದರೂ ನಡೆಯಬಹುದು. ನಮ್ಮ ಪಕ್ಷದಿಂದ ಸ್ಪರ್ಧಿಸುತ್ತೇವೆಂದು ತಿಳಿಸಿದರು.

ಆಮ್ ಆದ್ಮಿ ಪಕ್ಷದ ರಾಜ್ಯ ಉಪಾಧ್ಯಕ್ಷ ರಾಥೋಡ್ ಮಾತನಾಡಿ ಎಲ್ಲಾ ಜಿಲ್ಲೆಗಳಲ್ಲಿಯೂ ನಮ್ಮ ಪಕ್ಷದ ಕಾರ್ಯಕರ್ತರಿದ್ದಾರೆ. ಜನರ ಸಮಸ್ಯೆಗಳನ್ನು ತಿಳಿದುಕೊಳ್ಳುವುದಕ್ಕಾಗಿ ಜನಜಾಗೃತಿ, ಸದಸ್ಯತ್ವ ಅಭಿಯಾನ ಹಮ್ಮಿಕೊಂಡಿದ್ದೇವೆ. ಎರಡನೆ ಸಂವಾದಕ್ಕೆ ತುಮಕೂರಿನಿಂದ ಚಾಲನೆ ನೀಡಲಾಗಿದೆ ಎಂದರು.ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ಶ್ರೀಮತಿ ಸ್ವಾಮಿ ಮಾತನಾಡಿ ಮಹಿಳಾ ಸಬಲೀಕರಣ, ಸಮಾನತೆ ಎನ್ನುವುದು ಕೇವಲ ಭಾಷಣಕ್ಕೆ ಸೀಮಿತವಾಗಿದೆ. ಆದರೆ ಆಮ್ ಆದ್ಮಿ ಪಕ್ಷದಲ್ಲಿ ಮಹಿಳೆಯರಿಗೆ ಸಮಾನತೆ ನೀಡಲಾಗಿದೆ. ರಾಜಕೀಯದಲ್ಲಿ ಮಹಿಳೆಯರು ಮುಂದೆ ಬರಬೇಕು. ವಿಪರ್ಯಾಸವೆಂದರೆ ಮಹಿಳೆ ಚುನಾವಣೆಯಲ್ಲಿ ಗೆದ್ದರೆ ಪುರುಷರು ಅಧಿಕಾರ ನಡೆಸುವುದು ತಪ್ಪಬೇಕು ಎನ್ನುವುದು ನಮ್ಮ ಉದ್ದೇಶ. ಮುಂಬರುವ ಎಲ್ಲಾ ಚುನಾವಣೆಗಳಲ್ಲೂ ಮಹಿಳೆಯರನ್ನು ಸ್ಪರ್ಧೆಗಿಳಿಸಲಾಗುವುದು ಎಂದು ಹೇಳಿದರು.

ಆಮ್ ಆದ್ಮಿ ಪಕ್ಷದ ಜಿಲ್ಲಾಧ್ಯಕ್ಷ ಜಗದೀಶ್ ಬಿ.ಇ. ಲೋಕೇಶ್, ಜಂಬೂನಾಯ್ಕ ಪತ್ರಿಕಾಗೋಷ್ಠಿಯಲ್ಲಿದ್ದರು.

## ಫಾಸ್ಟ್ ನ್ಯೂಸ್

### ಕಾಯಕ ನಂಬಿರುವ ಮಡಿವಾಳ ಸಮುದಾಯ

» ಮೊದಲ ಪುಟದಿಂದ

ಪ್ರಾಸ್ತಾವಿಕವಾಗಿ ಮಾತನಾಡಿದ ಸಮಾಜದ ಜಿಲ್ಲಾ ಕಾರ್ಯಾಧ್ಯಕ್ಷ ಹೆಚ್.ಜಿ.ಉಮೇಶ್, ಸಮಾಜ ಸದೃಢವಾಗಿದ್ದರೆ ಯಾವುದೇ ಸರ್ಕಾರಗಳು ತಾವೇ ಮುಂದೆ ಬಂದು ಸೌಲಭ್ಯಗಳನ್ನು ನೀಡುತ್ತವೆ. ಕಾರಣ ಸಮಾಜದ ಕಾರ್ಯಕ್ರಮಗಳಲ್ಲಿ ನಾವೆಲ್ಲರೂ ಒಂದೆಡೆ ಸೇರಿ ಒಗ್ಗಟ್ಟು ಪ್ರದರ್ಶನ ಮಾಡಬೇಕು.

ಪರಿಶಿಷ್ಟರಂತೆ ಜೀವನ ಸಾಗಿಸುತ್ತಿರುವ ಮಡಿವಾಳ ಸಮುದಾಯವನ್ನು ಪರಿಶಿಷ್ಟ ಜಾತಿ ಪಟ್ಟಿಗೆ ಸೇರಿಸುವಂತೆ ನಮ್ಮನ್ನು ಆಳುವ ಸರ್ಕಾರಗಳಿಗೆ ಹಲವಾರು ಬಾರಿ ಮನವಿ ಮಾಡಿದ್ದರೂ ಸಹ ಯಾವುದೇ ಪ್ರಯೋಜನ ಅಗಿಲ್ಲ. ಶೈಕ್ಷಣಿಕವಾಗಿ ಹಿಂದುಳಿದ ನಮ್ಮ ಸಮುದಾಯವನ್ನು ಮೇಲಕ್ಕೆತ್ತಲು ಎಲ್ಲಾ ಪೋಷಕರು ಕಡ್ಡಾಯವಾಗಿ ಶಿಕ್ಷಣ ಕೊಡಿಸಲು ಮುಂದಾಗಬೇಕೆಂದು ಹೇಳಿದರು.ಪಾಲಿಕೆ ಸದಸ್ಯ ಪ್ರಸನ್ನಕುಮಾರ್ ಮಾತನಾಡಿದರು.ವಿನೋಬಾ ನಗರದ ಶ್ರೀಜಡೇಸಿದ್ದ ಯೋಗೀಶ್ವರ ಮಠದ ಶ್ರೀಶಿವಾನಂದ ಸ್ವಾಮೀಜಿ ಹಾಗೂ ರಾಣೇಬೆನ್ನೂರು ವಿರಕ್ತ ಮಠದ ಗುರು ಬಸವ ಶ್ರೀಗಳು ಸಾನಿಧ್ಯ ವಹಿಸಿದ್ದರೆ, ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷ ಎಂ.ನಾಗೇಂದ್ರಪ್ಪ ವಹಿಸಿದ್ದರು. ವೇದಿಕೆಯಲ್ಲಿ ಓಂಕಾರಪ್ಪ, ಜಿ.ಬಿ.ವಿನಯ್ ಕುಮಾರ್, ವನಜಾಕ್ಷಮ್ಮ ಪಾಂಡುರಂಗಪ್ಪ, ನೇತ್ರಾವತಿ ನಾಗರಾಜ್, ಜಿ.ಹೆಚ್.ನಾಗರಾಜ್ ಹಾಜರಿದ್ದರು.

### ಹಳೇ ಕುಂದುವಾಡದಲ್ಲಿ "ಸಸ್ಯಶಾಮಲ"



» ದಾವಣಗೆರೆ

ಇಲ್ಲಿಗೆ ಸಮೀಪದ ಹಳೇ ಕುಂದುವಾಡದಲ್ಲಿನ ಸರ್ಕಾರಿ ಪ್ರೌಢಶಾಲೆ ಮತ್ತು ಪ್ರಾಥಮಿಕ ಶಾಲೆಯಲ್ಲಿ "ಸಸ್ಯಶಾಮಲ" ಕಾರ್ಯಕ್ರಮವನ್ನು ಇಂದು ಸೋಮವಾರ ಹಮ್ಮಿಕೊಳ್ಳಲಾಗಿತ್ತು.ದಾವಣಗೆರೆಯ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ (ಆಡಳಿತ) ಕೊಟ್ರೇಶ್ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಈ ಸಂದಂರ್ಭದಲ್ಲಿ ಗ್ರಾಮದ ಮುಖಂಡರಾದ ಹೆಚ್.ಜಿ. ಮಂಜಪ್ಪ, ಬಸವರಾಜಪ್ಪ ಗೌಡರು, ಪ್ರೌಢಶಾಲಾ ಹಿರಿಯ ಶಿಕ್ಷಕರಾದ ಕೆ. ಸುವರ್ಣಮ್ಮ ಮತ್ತು ಶಾಲಾ ಶಿಕ್ಷಕರು ಹಾಗೂ ಪ್ರಾಥಮಿಕ ಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಗದಿಗೇಶ್ ಹೆಚ್., ಉಪಧ್ಯಾಕ್ಷರಾದ ವಸಂತಮ್ಮ ಬಿ.ಎನ್., ಮುಖ್ಯೋಪಧ್ಯಾಯರಾದ ಹನುಮಂತಪ್ಪ ಮತ್ತು ಸಹ ಶಿಕ್ಷಕರು ಇದ್ದರು.

### ಬ್ಯಾಡ್ಮಿಂಟನ್: ಮೊರಾರ್ಜಿ ಅಲ್ಪಸಂಖ್ಯಾಯ ಶಾಲೆಗೆ ಪ್ರಥಮ ಸ್ಥಾನ



» ಚಳ್ಳಕೆರೆ

ನಗರದ ಬಿಎಂ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ ಜಿಲ್ಲಾ ಬಾಲ್ ಬ್ಯಾಡ್ಮಿಂಟನ್ ಅಸೋಸಿಯೇಷನ್ ನೇತೃತ್ವದಲ್ಲಿ ನಡೆದ ಜಿಲ್ಲಾ ಮಟ್ಟದ ಪಂದ್ಯಾವಳಿಯಲ್ಲಿ ಉತ್ತಮ ಫಲಿತಾಂಶ ಲಭ್ಯವಾಗಿದೆ ಎಂದು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಸ್.ಶ್ರೀರಾಮನಾಯಕ ತಿಳಿಸಿದ್ದಾರೆ.ಅವರು, ಪತ್ರಿಕೆಗೆ ಮಾಹಿತಿ ನೀಡಿ, ಕರ್ನಾಟಕ ರಾಜ್ಯ ದೈಹಿಕ ಶಿಕ್ಷಣ ಶಿಕ್ಷಕರ ಸಂಘ ಮತ್ತು ಚಳ್ಳಕೆರೆ ಟೌನ್ ಬಾಲ್ ಬ್ಯಾಡ್ಮಿಂಟನ್ ಆಶ್ರಯದಲ್ಲಿ ಈ ಪಂದ್ಯಾವಳಿಯನ್ನು ಹಮ್ಮಿಕೊಳ್ಳಲಾಗಿತ್ತು. ಪಂದ್ಯಾವಳಿಯಲ್ಲಿ ಜಿಲ್ಲೆಯ ವಿವಿಧ ತಾಲ್ಲೂಕುಗಳಿಂದ ತಂಡಗಳು ಆಗಮಿಸಿ ಉತ್ತಮ ಆಟ ಪ್ರದರ್ಶಿಸಿದವು. ಪ್ರಥಮ ಬಹುಮಾನವನ್ನು ಬಾಲಕರ ವಿಭಾಗದಲ್ಲಿ ಹೊಸದುರ್ಗ ತಾಲ್ಲೂಕಿನ ಬೆಲಗೂರು, ದ್ವಿತೀಯ ಸ್ಥಾನ ಚಿತ್ರದುರ್ಗ ತಾಲ್ಲೂಕಿನ ಚವಲಿಹಳ್ಳಿ ಪಡೆದಿದ್ದು, ಬಾಲಕಿಯರ ವಿಭಾಗದಲ್ಲಿ ಪ್ರಥಮ ಸ್ಥಾನವನ್ನು ಚಳ್ಳಕೆರೆಯ ಅಲ್ಪಸಂಖ್ಯಾತ ಮೊರಾರ್ಜಿ ದೇಸಾಯಿ ಶಾಲೆ, ದ್ವಿತೀಯ ಸ್ಥಾನವನ್ನು ತಾಲ್ಲೂಕಿನ ಕಲಮರಹಳ್ಳಿಯ ಸರ್ಕಾರಿ ಪ್ರೌಢಶಾಲೆ ಪಡೆದಿವೆ. ಕಾರ್ಯಕ್ರಮದಲ್ಲಿ ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕ ಜಿ.ಗುರುಮೂರ್ತಿ, ಅಧ್ಯಕ್ಷ ಆರ್.ಸಿದ್ದಲಿಂಗಪ್ಪ, ಡಿ.ಜೆ.ಅನಿಲ್‌ಕುಮಾರ್ ಮುಂತಾದವರು ಭಾಗವಹಿಸಿದ್ದರು.

### ಆಕ್ಷೇಪಣೆ ಸಲ್ಲಿಸಲು ಕೊನೆಯ ದಿನ

» ಚಿತ್ರದುರ್ಗ

ಹೊಸದುರ್ಗ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ 10 ಅಂಗನವಾಡಿ ಕಾರ್ಯಕರ್ತೆಯರ ಹಾಗೂ 12 ಸಹಾಯಕಿಯರ ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿ ಹೊಸದುರ್ಗ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ಪ್ರಕಟಿಸಲಾಗಿದೆ.

---

ನರೇಗಾ ಮೂಲಕ ಗ್ರಾಮೀಣರಿಗೆ ನೆರವಾಗಿ– ಜಿಪಂ ಸಿಇಒ ಎಸ್.ಜೆ.ಸೋಮಶೇಖರ್

# ತಾಲ್ಲೂಕಿನಾದ್ಯಂತ ಬರಗಾಲದ ಛಾಯೆ

» ಚಳ್ಳಕೆರೆ





ಮುಂಗಾರು ಮಳೆ ವೈಫಲ್ಯ ಹಿನ್ನೆಲೆಯಲ್ಲಿ ತಾಲ್ಲೂಕಿನಾದ್ಯಂತ ಈಗಾಗಲೇ ಬರಗಾಲದ ಕಪ್ಪುಛಾಯೆ ಮೂಡಿದ್ದು, ಗ್ರಾಮೀಣ ಭಾಗದ ಕೂಲಿಕಾರ್ಮಿಕರಿಗೆ ಗ್ರಾಮ ಪಂಚಾಯಿತಿಯಿಂದ ನರೇಗಾ ಯೋಜನೆಯಡಿ ಕಾಮಗಾರಿಗಳನ್ನು ಆಯೋಜಿಸಿ ಕೂಲಿಕಾರ್ಮಿಕರ ಬದುಕಿಗೆ ಆಸರೆಯಾಗಬೇಕೆಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್.ಜೆ.ಸೋಮಶೇಖರ್ ತಿಳಿಸಿದರು.

ತಾಲ್ಲೂಕು ಪಂಚಾಯಿತಿ ಕಚೇರಿ ಆವರಣದ ಪಂಚಾಯಿತಿ ಅಭಿವೃದ್ದಿಗಳ ಸಭೆಯಲ್ಲಿ ಏರ್ಪಡಿಸಿದ್ದ ವಾಸ್ತವ ಸ್ಥಿತಿಯನ್ನುಅವಲೋಕಿಸಿ,ಪ್ರಗತಿಪರಿಶೀಲನೆ ನಡೆಸಿದರು. ತಾಲ್ಲೂಕಿನ ವಿವಿಧ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಂದ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ವಿವಿಧ ಯೋಜನೆಗಳ ಅನುಷ್ಠಾನ, ಖರ್ಚು,ವೆಚ್ಚ ಮೂಲ ಸೌಕರ್ಯ, ಕುಡಿಯುವ ನೀರು, ವಿದ್ಯುತ್ ಪೂರೈಕೆ, ಘನತ್ಯಾಜ್ಯವಿಲೇವಾರಿ ಘಟಕಗಳ ಕಾರ್ಯನಿರ್ವಹಣೆಯ ಬಗ್ಗೆ ಚರ್ಚೆ ನಡೆಸಿದರು.ಸರ್ಕಾರ ಜಿಲ್ಲೆಯ ಎರಡೂ ತಾಲ್ಲೂಕುಗಳನ್ನು ಹೊರತು ಪಡಿಸಿ ಉಳಿದ ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶವೆಂದು ಈಗಾಗಲೇ ಘೋಷಣೆ ಮಾಡಿದೆ. ಜಿಲ್ಲೆಯಲ್ಲಿ ಇನ್ನೂ ಎರಡು ತಾಲ್ಲೂಕುಗಳ ಘೋಷಣೆಯಾಗಬೇಕಿದೆ. ಆದರೂ ಸಹ ಅಧಿಕಾರಿ ವರ್ಗ ಸಾರ್ವಜನಿಕರ ಹಿತದೃಷ್ಠಿಯಿಂದ ಉತ್ತಮವಾಗಿ ಕೆಲಸ ಮಾಡಬೇಕಾಗುತ್ತದೆ. ಸರ್ಕಾರದ ಯೋಜನೆಗಳ ಅನುಷ್ಠಾನದಲ್ಲಿ ನಿರೀಕ್ಷಿತ ಮಟ್ಟದ ವೇಗ ಕಾಣುತ್ತಿಲ್ಲ, ಆದ್ದರಿಂದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಕೆಲಸ ಕಾರ್ಯಗಳ ಬಗ್ಗೆ ಹೆಚ್ಚಿನ ಗಮನ ಹಾಗೂ ಆದ್ಯತೆ ನೀಡಬೇಕು. ನೀವು ಮಾಡುವ ಉತ್ತಮ ಕೆಲಸದಿಂದ ಗ್ರಾಮ ಪಂಚಾಯಿತಿ ಅಭಿವೃದ್ಧಿಯಷ್ಟೇಯಲ್ಲದೆ, ಇಲಾಖೆಗೂ ಉತ್ತಮ ಹೆಸರು ಬರಲಿದೆ ಎಂದರು.

ಪ್ರಾಸ್ತಾವಿಕವಾಗಿಮಾತನಾಡಿದತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಜೆ.ಕೆ.ಹೊನ್ನಯ್ಯ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಮಾರ್ಗದರ್ಶನದಲ್ಲಿ ವಿವಿಧ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಈಗಾಗಲೇ ಹಲವಾರು ಕಾಮಗಾರಿಗಳ ಅನುಷ್ಠಾನಗೊಳಿಸಲಾಗಿದೆ. ಸ್ವಚ್ಚತೆ ಮತ್ತು ಕುಡಿಯುವ ನೀರಿನ ವ್ಯವಸ್ಥೆಗೆ ಯಾವುದೇ ರೀತಿಯ ತೊಂದರೆ ಉಂಟಾಗದಂತೆ ಜಾಗ್ರತೆ ವಹಿಸಿದೆ. ಪ್ರತಿನಿತ್ಯ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಜತೆ ಸಮಾಲೋಚನೆ ನಡೆಸಲಾಗುತ್ತಿದೆ. ಸಾರ್ವಜನಿಕರಿಗೆ ಉತ್ತಮ ಸೇವೆಯನ್ನು ಕೊಡುವ ನಿಟ್ಟಿನಲ್ಲಿ ತಾಲ್ಲೂಕು ಪಂಚಾಯಿತಿ ಸಕರಾತ್ಮಕವಾಗಿ ಕಾರ್ಯನಿರ್ವಹಿಸಲಿದೆ ಎಂದರು.ಇದೇ ಸಂದರ್ಭದಲ್ಲಿ ನರೇಗಾ ಯೋಜನೆಯಡಿ ತಾಲ್ಲೂಕಿನ ಸಾಣೀಕೆರೆ ಗ್ರಾಮದಲ್ಲಿ ನಿರ್ಮಾಣವಾದ ಅಮೃತ ಸರೋವರ,ಬೆಳಗೆರೆಯಲ್ಲಿನಿರ್ಮಾಣವಾದ ಕಲ್ಯಾಣಿ ಮತ್ತು ಘನತ್ಯಾಜ್ಯ ಘಟಕವನ್ನು ವೀಕ್ಷಿಸಿದರು. ಈ ಸಂದರ್ಭದಲ್ಲಿ ಸಂಬಂಧಪಟ್ಟ ಪಿಡಿಒಗೆ ಸೂಚಿಸಿದ ಅವರು, ನಿರ್ವಹಣೆಯಲ್ಲಿ ಯಾವುದೇ ಲೋಪ ಉಂಟಾಗದಂತೆ ಜಾಗ್ರತೆ ವಹಿಸಬೇಕು. ಯಾವುದೇ ಸಮಸ್ಯೆ ಉಂಟಾದಲ್ಲಿ ಸಂಬಂಧಪಟ್ಟ ಪಿಡಿಒ ಮೇಲೆ ಕಾನೂನು ಕ್ರಮ ಜರುಗಿಸುವ ಎಚ್ಚರಿಕೆ ನೀಡಿದರು. ಉಪಕಾರ್ಯದರ್ಶಿ ಕೊರಮತಿಮ್ಮಪ್ಪ, ಜಿಲ್ಲಾ ಮುಖ್ಯಯೋಜಣಾಧಿಕಾರಿ ಸತೀಶ್‌ರೆಡ್ಡಿ, ಕಾರ್ಯಪಾಲಕ ಅಭಿಯಂತರ ಹನುಮಂತಪ್ಪ, ನರೇಗಾ ಸಹಾಯಕ ನಿರ್ದೇಶಕ ಸಂತೋಷ್ ಭಾಗವಹಿಸಿದ್ದರು.

---

## ಧರ್ಮಸ್ಥಳ ಸರ್ವಧರ್ಮಗಳ ಸಮನ್ವತೆಯ ಕ್ಷೇತ್ರ

» ಹೊಸದುರ್ಗ




ಪ್ರಪಂಚದಲ್ಲಿಯೇ ವಿವಿಧ ದಾಸೋಹಗಳಿಗೆ ಶ್ರೀ ಧರ್ಮಸ್ಥಳ ಕ್ಷೇತ್ರ ಬಹಳಹೆಸರುವಾಸಿಯಾಗಿದೆ. ಈ ಕ್ಷೇತ್ರವೂ ಹಿಂದೂ, ಇಸ್ಲಾಂ, ಜೈನ, ಬೌದ್ಧ, ಕ್ರೈಸ್ತ ಹಾಗೂ ಎಲ್ಲಾ ಧರ್ಮದ ಸಮನ್ವಯತೆಯ ನೆಲೆಬೀಡಾಗಿದೆ. ಅಲ್ಲದೇ, ಅನ್ನ, ಆಶ್ರಯ, ಜ್ಞಾನದಾಸೋಹದ ಪುಣ್ಯಭೂಮಿ ಎಂದು ರಾಜ್ಯ ಪ್ರಶಸ್ತಿ ಪುರಸ್ಕೃತ, ಹಿರಿಯ ಪತ್ರಕರ್ತ ಮಂಜುನಾಥ್ ಹೇಳಿದರು.

ಪಟ್ಟಣದ ಗಣೇಶ ಸದನದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ವತಿಯಿಂದ ಆಯೋಜಿಸಿದ್ದ ಸಾಮೂಹಿಕ ವರಮಹಾಲಕ್ಷ್ಮಿ ಪೂಜೆ, ಧಾರ್ಮಿಕ ಸಭಾ ಕಾರ್ಯಕ್ರಮ ಮತ್ತು ವಿವಿಧ ಒಕ್ಕೂಟಗಳ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಅವರು ಮಾತನಾಡಿದರು.

ಎಲ್ಲಾ ಸಂಪತ್ತುಗಳಿಗಿಂತ ತಾಯಿಯ ಪ್ರೀತಿಯ ಸಂಪತ್ತು ಬಹಳ ದೊಡ್ಡದು. ಧಾರ್ಮಿಕವಾಗಿ, ಆಧ್ಯಾತ್ಮಿಕವಾಗಿ, ವೈಚಾರಿಕವಾಗಿ ಮತ್ತು ಸಾಮಾಜಿಕವಾಗಿ ಮಹಿಳೆಯರು ಸದೃಢರಾಗಲಿ ಎಂದು ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆಯವರು ವರಮಹಾಲಕ್ಷ್ಮಿ ಪೂಜೆಯನ್ನು ಸಾಮೂಹಿಕವಾಗಿ ಮಾಡುತ್ತಿದ್ದಾರೆ. ಮಹಿಳೆಯರ ಶಕ್ತಿ ಏನೆಂಬುದು ಭಾರತದಿಂದ ಜಗತ್ತಿಗೆ ಪರಿಚಯವಾಗಿದೆ ಎಂದರು.


ಪಾಕಿಸ್ತಾನದಲ್ಲಿ ನಾನು ಯಾಕಾದರೂ ಹುಟ್ಟಿದ್ದೇನೆಂದು ಅಲ್ಲಿನ ನಿವಾಸಿಗಳು ಹೇಳುತ್ತಾರೆ. ನಾವು ಭಾರತದಲ್ಲಿ ಹುಟ್ಟಿರುವುದು ನಮ್ಮ ಪುಣ್ಯ. ಭಾರತ ದೇಶದಲ್ಲಿ ಎಲ್ಲರನ್ನೂ ಒಂದುಗೂಡಿಸುವ ಮಾನವೀಯ ಧರ್ಮವಿದ್ದು, ಎಲ್ಲರನ್ನೂ ಪ್ರೀತಿಸುವ ಗುಣ ಹೊಂದಿದೆ. ಎಲ್ಲವನ್ನು ಬಿಟ್ಟು ಮಣ್ಣಾಗುವ ಈ ದೇಹ ಆಸೆ ಆಮಿಷಗಳಿಂದ ದೂರವಾಗಿ ಬದುಕಬೇಕು. ದೇಶದಲ್ಲಿ 6, 400 ಜಾತಿಗಳಿದ್ದರೂ, ರಾಷ್ಟ್ರದ ವಿಚಾರದಲ್ಲಿ ನಾವೆಲ್ಲರೂ ಒಂದಾಗುತ್ತೇವೆ. ಇದು ಇನ್ನಿತರ ರಾಷ್ಟ್ರಗಳ ಜನರನ್ನು ಬೆರಗಾಗುವಂತೆ ಮಾಡಿದೆ ಎಂದು ತಿಳಿಸಿದರು.

ಈ ವೇಳೆ ಮುಖಂಡರಾದ ಇಲ್ಕಲ್ ಅಜ್ಜಪ್ಪ, ಏಸ್.ಆರ್.ಗೋಪಾಲ್, ಆಗ್ರೋ ಶಿವಣ್ಣ, ತುಂಬಿನಕೆರೆ ಬಸವರಾಜ್, ಸಿಂಧು ಅಶೋಕ್, ವಸತಿ ಕುಮಾರ್ ಮತ್ತು ಯೋಜನಾಧಿಕಾರಿ ಮಂಜುನಾಥ್ ಸೇರಿದಂತೆ ಹಲವು ಮುಖಂಡರು ಹಾಗೂ ಸಾವಿರಾರು ಮಹಿಳೆಯರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಲೋಕದಾಲತ್ 4,224 ಪ್ರಕರಣ ರಾಜಿ ಸಂಧಾನದ ಮೂಲಕ ಮುಕ್ತಾಯ

» ದಾವಣಗೆರೆ

ರಾಷ್ಟ್ರೀಯ ಲೋಕ ಅದಾಲತ್ ಮೂಲಕ ರಾಜಿ ಸಂಧಾನದಡಿ ಜಿಲ್ಲೆಯಲ್ಲಿ 4224 ಪ್ರಕರಣಗಳನ್ನು ನ್ಯಾಯಲಯದ ಪ್ರಕರಣಗಳನ್ನು ಮುಕ್ತಾಯಗೊಳಿಸಲಾಗಿದೆ ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ವ ಂ ಹ ಾ ವ ೀ ರ ಂ ಎಂ. ಕರೆಣ್ಣವರ ತಿಳಿಸಿದ್ದಾರೆ.



ಶನಿವಾರಸರ್ವೋಚ್ಚ ನ್ಯಾಯಾಲಯ, ರಾಜ್ಯ ಉಚ್ಚ ನ್ಯಾಯಾಲಯ ಹಾಗೂ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ನಿರ್ದೇಶನದಂತೆ, ಜಿಲ್ಲೆಯ 25 ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕ್ ಆದಾಲತ್‌ನ್ನು ಹಮ್ಮಿಕೊಳ್ಳಲಾಗಿತ್ತು. ಜಿಲ್ಲೆಯಲ್ಲಿ ಒಟ್ಟು ವರೆಗಿನ ವರದಿಯ ಪ್ರಕಾರ 4224 ಜಾರಿಯಲ್ಲಿರುವ ಪ್ರಕರಣಗಳಲ್ಲಿ ರೂ. 11,94,55,608 ಹಣದ ಪರಿಹಾರ ಒದಗಿಸಲಾಗಿದೆ. ಮತ್ತು 99,140 ವ್ಯಾಜ್ಯಪೂರ್ವ ಪ್ರಕರಣಗಳಲ್ಲಿ 47,19,22,606 ಹಣದ ಪರಿಹಾರವಾಗಿ ರಾಜೀ ಮೂಲಕ ಕೊಡಿಸಿ ಪ್ರಕರಣಗಳನ್ನು ಮುಕ್ತಾಯಗೊಳಿಸಲಾಗಿದೆ. ವಿವಿಧ ಪ್ರಕರಣಗಳ ವಿವರ: 103 ಅಪರಾಧಿಕ ಪ್ರಕರಣಗಳು, 107 ಚೆಕ್ ಅಮಾನ್ಯ ಪ್ರಕರಣಗಳು, 28 ಬ್ಯಾಂಕ್ ಪ್ರಕರಣಗಳು, 24 ಹಣ ವಸೂಲಾತಿ ಪ್ರಕರಣಗಳು, 41 ಮೋಟಾರು ವಾಹನ ಅಪಘಾತ ಪರಿಹಾರ ಪ್ರಕರಣಗಳು, 92 ವಿದ್ಯುತ್ ಪ್ರಸರಣ ನಿಗಮದ ವಿರುದ್ಧದ ಪ್ರಕರಣಗಳು, 20 ಮರಳು ಗಣಿಗಾರಿಕೆ ಪ್ರಕರಣಗಳು, 29 ಪಾಲು ವಿಭಾಗ ಪ್ರಕರಣಗಳು, 10 ಮೋಟಾರು ವಾಹನ ಪರಿಹಾರದ ಜಾರಿ ಪ್ರಕರಣಗಳು, 139 ಇತರ ಜಾರಿ ಅರ್ಜಿಗಳು ಮತ್ತು 121 ಇತರೆ ಸಿವಿಲ್ ಪ್ರಕರಣಗಳು ಪ್ರಕರಣಗಳಾಗಿರುತ್ತವೆ. ಅದರಂತೆ ಒಟ್ಟು 26 ಜೀವನಾಂಶ ಪ್ರಕರಣಗಳು, 13 ಕೌಟುಂಬಿಕ ದೌರ್ಜನ್ಯದಿಂದ ಮಹಿಳೆಯರನ್ನು ರಕ್ಷಿಸುವ ಕಾಯ್ದೆಯಡಿಯ ಪ್ರಕರಣಗಳು, 3,457 ಇತರೆ ಲಘು ಅಪರಾಧಿಕ ಪ್ರಕರಣಗಳು ಸೇರಿರುತ್ತವೆ. ಮೇಲ್ಕಾಣಿಸಿದ ಇತ್ಯರ್ಥವಾದ ಪ್ರಕರಣಗಳಲ್ಲಿ ಪ್ರಮುಖವಾಗಿ ಕೌಟುಂಬಿಕ ಕಲಹದಿಂದಾಗಿ ಬೇರೆಯಾಗಿದ್ದ 13 ಜೋಡಿ ದಂಪತಿಗಳು ಒಂದಾಗಿದ್ದು ವಿಶೇಷವಾಗಿತ್ತು. ಅಲ್ಲದೇ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ಇವರ ವಿರುದ್ಧ ದಾಖಲಾಗಿದ್ದ ಪ್ರಕರಣಗಳಲ್ಲಿ ನಿಗಮದವರು 92 ಪ್ರಕರಣಗಳನ್ನು ರಾಜೀ ಮಾಡಿಕೊಂಡು ರೂ. 90,00,000 ಕ್ಕಿಂತ ಹೆಚ್ಚಿನ ಹಣವನ್ನು ರೈತರಿಗೆ ಸಂದಾಯ ಮಾಡಲು ಆದೇಶಿಸಲಾಗಿದೆ. ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಪ್ರಕರಣಗಳನ್ನು ಇತ್ಯರ್ಥ ಪಡಿಸಲು ಸಹಕರಿಸಿದ ನ್ಯಾಯಾವಾದಿಗಳು, ವಕೀಲರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಅಭಿನಂದಿಸಿರುತ್ತಾರೆ.,

## ಸುಮತಿ ಗ್ರಾಮೀಣಾಭಿವೃದ್ಧಿ ಸಂಸ್ಥೆ ಸಹಯೋಗದಲ್ಲಿ ಜಾನಪದ ಜಾತ್ರೆ

» ಚಳ್ಳಕೆರೆ



ಕಳೆದ ಹಲವಾರು ದಶಕಗಳಿಂದ ನಮ್ಮ ಸಂಸ್ಕೃತಿ ಮತ್ತು ಸಂಸ್ಕಾರವನ್ನು ಉಳಿಸಿ ಬೆಳೆಸಿದ ಕೀರ್ತಿ ಜಾನಪದ ಕಲೆಯದ್ದು. ಜಾನಪದ ಕಲೆ ನಮಗೆ ನಮ್ಮ ಹಿರಿಯರು ನೀಡಿದ ವಿಶೇಷ ಕೊಡುಗೆ. ಇಂದಿಗೂ ಸಹ ಹಲವಾರು ಗ್ರಾಮಗಳಲ್ಲಿ ನಾವು ಜಾನಪದ ಕಲಾವಿದರನ್ನು ಕಾಣಬಹುದಾಗಿದೆ. ಜಾನಪದ ಕಲೆಯನ್ನು ಶಾಶ್ವತವಾಗಿ ನೆಲೆಯೂರುವಂತೆ ಮಾಡಲು ಎಲ್ಲರೂ ಕೈಜೋಡಿಸಬೇಕೆಂದು ಹಿರಿಯ ಕಲಾವಿದ ಪಗಡಲಬಂಡೆ ನಾಗೇಂದ್ರಪ್ಪ ತಿಳಿಸಿದರು.

ಅವರು, ರೋಟರಿ ಬಾಲಭವನದಲ್ಲಿ ಶನಿವಾರ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಸುಮತಿ ಗ್ರಾಮೀಣಾಭಿವೃದ್ಧಿ ಸಂಸ್ಥೆ ಹಮ್ಮಿಕೊಂಡಿದ್ದ ಜಾನಪದ ಜಾತ್ರೆ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಕಳೆದ ಕೆಲವು ವರ್ಷಗಳಿಂದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನೇತೃತ್ವದಲ್ಲಿ ಸುಮತಿ ಗ್ರಾಮೀಣಾಭಿವೃದ್ಧಿ ಸಂಸ್ಥೆ ಅಧ್ಯಕ್ಷರು, ಕಾರ್ಯದರ್ಶಿಗಳು ಜಾನಪದ ಜಾತ್ರೆಯನ್ನು ಹಮ್ಮಿಕೊಳ್ಳುವ ಮೂಲಕ ನಮ್ಮ ಪ್ರಾಚೀನ ಕಲೆಯ ವೈಭವವನ್ನು ಮತ್ತೊಮ್ಮೆ ಕಾಣುವಂತೆ ಮಾಡಿದ್ದಾರೆ. ಪ್ರಸ್ತುತ ಜಾನಪದ ಜಾತ್ರೆಯಲ್ಲಿ ಗರಡುಗಂಭ ದಾಸಯ್ಯ, ಭರತನಾಟ್ಯ, ಸೋಬಾನೆಪದ,ಗೊರವಯ್ಯನವೇಷ,ಕೋಲಾಟ, ಹುಲಿವೇಷ ಮುಂತಾದ ಜಾನಪದ ಕಲೆಗಳನ್ನೇ ಪ್ರಧಾನವಾಗಿಟ್ಟುಕೊಂಡು ಈ ಕಾರ್ಯಕ್ರಮ ಆಯೋಜಿಸಿರುವುದು ಹೆಚ್ಚು ಸಂತಸ ತಂದಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸಂಸ್ಥೆಯ ಅಧ್ಯಕ್ಷೆ ಎಂ.ವಿ.ಶಿವಕುಮಾರಿ, ಪ್ರತಿವರ್ಷ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಈ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಚಳ್ಳಕೆರೆ ತಾಲ್ಲೂಕು ನೂರಾರು ಜಾನಪದ ಕಲಾವಿದರು ಹಾಗೂ ಜಾನಪದ ಪ್ರಾಕೃತಿಗಳನ್ನು ಹೊಂದಿದ ಪ್ರದೇಶ. ಈ ಭಾಗದಲ್ಲಿ ಈ ಕಾರ್ಯಕ್ರಮ ಆಯೋಜಿಸಿರುವುದು ಹೆಚ್ಚು ಸಂತಸ ತಂದಿದೆ ಎಂದರು.

---

ಪ್ರಮುಖ ಸುದ್ದಿ

# ಇಸ್ಕಾನ್‌ವತಿಯಿಂದ ಆಚರಿಸಿದ ಶ್ರೀ ಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮಕ್ಕೆ ಶಾಸಕ ಎನ್.ವೈ.ಗೋಪಾಲಕೃಷ್ಣ ಚಾಲನೆ

» ಮೊಳಕಾಲ್ಮುರು



ಮೊಳಕಾಲ್ಮುರು ತಾಲ್ಲೂಕಿನ ರಾಂಪುರ ಗ್ರಾಮದಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮಕ್ಕೆ ಶಾಸಕರಾದ ಎನ್. ವೈ. ಗೋಪಾಲಕೃಷ್ಣ ಚಾಲನೆ ನೀಡಿದರು ಕಾರ್ಯಕ್ರಮವನ್ನು ಅತ್ಯಂತ ಭಕ್ತಿ ಬಾವದಿಂದ ಆಚರಿಸಲಾಯಿತು

ಹರೇ ಕೃಷ್ಣ ಇಸ್ಕಾನ್ ರಾಂಪುರ ವತಿಯಿಂದ ಶ್ರೀ ಕೃಷ್ಣ ಜನ್ಮಾಷ್ಟಮಿ ಮಹೋತ್ಸವ ಕಾರ್ಯಕ್ರಮ ಅತ್ಯಂತ ವಿಜೃಂಭಣೆಯಿಂದ ನೆರವೇರಿಸಲಾಯಿತು ಬೆಳಿಗ್ಗೆ 10:00ಯಿಂದ ಸಂಕೀರ್ತನೆ ಮೆರವಣಿಗೆಯೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ನೆರವೇರಿಸಲಾಯಿತು ಸಂಜೆ 5:30 ರಿಂದ ಸಾಂಸ್ಕೃತಿಕ ಕಾರ್ಯಕ್ರಮ ಶಾಲಾ ಮಕ್ಕಳಿಂದ ಹಾಗೂ ಚಿಕ್ಕ ಮಕ್ಕಳಿಂದ ವೇಷಭೂಷಣ ನೃತ್ಯ ಮತ್ತು ಇಸ್ಕಾನ್ ವತಿಯಿಂದ ಆಧ್ಯಾತ್ಮಿಕ ಸ್ಪರ್ಧೆಯಲ್ಲಿ ಭಗವದ್ಗೀತೆ ಶ್ಲೋಕ ಪಠಣ ರಂಗೋಲಿ ಸ್ಪರ್ಧೆ ಭಗವದ್ಗೀತೆ ರಾಮಾಯಣ ಮಹಾಭಾರತದ ರಸಪ್ರಶ್ನೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು ವಿವಿಧ ಶಾಲಾ ಕಾಲೇಜುಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಮಕ್ಕಳು ಭಾಗವಹಿಸಿದ್ದರು ಇದರಲ್ಲಿ ವಿಜೇತರಾದವರಿಗೆ ಪ್ರಶಸ್ತಿ ಪತ್ರದೊಂದಿಗೆ ಬಹುಮಾನವನ್ನು ವಿತರಣೆ ಮಾಡಲಾಗಿರುತ್ತದೆ ನಂತರದಲ್ಲಿ 7:00 ಗಂಟೆಗೆ ರಾಧಾಕೃಷ್ಣ ಚಂದ್ರರಿಗೆ ಶೋಡೂಪಚಾರ ವಿದಿವಿಧಾನಗಳೊಂದಿಗೆ ಮಹಾಭಿಷೇಕ ಕಾರ್ಯಕ್ರಮ ಹಾಗೂ ಇಸ್ಕಾನ್ ಸಂಸ್ಥೆ ವತಿಯಿಂದ ಅನ್ನ ಸಂತರ್ಪಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು ಕಾರ್ಯಕ್ರಮದಲ್ಲಿ ಸುಮುಖ ಹರಿ ಪ್ರಭುಜಿ . ಪ್ರಚಾರಕರು ಬಳ್ಳಾರಿ ಸೇವಾ ಪರಿಯಣ ಗೋವಿಂದ ಪ್ರಭುಜಿ. ಪ್ರಚಾರಕರು ಚಿತ್ರದುರ್ಗ ಚಂದ್ರಮುಖ ನಾರಾಯಣ ದಾಸ್. ಇಸ್ಕಾನ್ ರಾಂಪುರ.ರಂಗಮಯಾ ದಾಸ್ ಪ್ರಭುಜಿ ಬಳ್ಳಾರಿ ಇಸ್ಕಾನ್. ಮತ್ತು ಇಸ್ಕಾನ್ ರಾಂಪುರ ಮತ್ತು ಬಳ್ಳಾರಿ ಭಕ್ತಾದಿಗಮತ್ತು ಇಸ್ಕಾನ್ ವತಿಯಿಂದ ಅನ್ನ ಸಂತರ್ಪಣೆ ಮಾಡಲಾಯಿತು ಸುಮಾರು 2000 ಜನ ಪ್ರಸಾದವನ್ನು ಸ್ವೀಕರಿಸಿದ್ದಾರೆಳು ಮೊಳಕಾಲ್ಮೂರು ಭಕ್ತರು ಉಪಸ್ಥಿತರಿದ್ದರು

## ಫಾಸ್ಟ್ ನ್ಯೂಸ್

### ಮನೆಯ ಬೀಗ ಮುರಿದು 1.40 ಲಕ್ಷ ಮೌಲ್ಯದ ಆಭರಣ ಕಳವು.

» **ಚಳ್ಳಕೆರೆ**

ಚಳ್ಳಕೆರೆ ಠಾಣಾ ವ್ಯಾಪ್ತಿಯ ನರಹರಿ ನಗರದಲ್ಲಿ ಟೀ ಅಂಗಡಿಯಲ್ಲಿ ವ್ಯಾಪಾರ ಮಾಡುವ ಮಾರುತಿ ಎಂಬುವವರು ತಮ್ಮ ಮನೆಯ ಬೀಗ ಹಾಕಿ ಊರಿಗೆ ಹೋದ ಸಂದರ್ಭದಲ್ಲಿ ಯಾರೋ ಕಳ್ಳರು ಮನೆಯ ಬೀಗ ಮುರಿದು 20 ಗ್ರಾಂ ತೂಕದ ಮಾಂಗಲ್ಯ ಸರ, 10 ಗ್ರಾಂ ತೂಕದ ಜುಮುಕಿ ಒಟ್ಟು 1.40 ಲಕ್ಷ ಮೌಲ್ಯದ ಆಭರಣಗಳನ್ನು ಕಳ್ಳತನ ಮಾಡಿಕೊಂಡು ಹೋಗಿರುತ್ತಾರೆ. ಈ ಬಗ್ಗೆ ದೂರು ಬಂದ ಹಿನ್ನೆಲೆಯಲ್ಲಿ ಪಿಎಸ್ಐ ಕೆ.ಸತೀಶ್‌ನಾಯ್ಕ ಪ್ರಕರಣ ದಾಖಲಿಸಿ ತನಿಖೆ ನಡೆಸುತ್ತಿದ್ದಾರೆ.

### ತಂಬಾಕು ಸೇವನೆ ಹಾನಿಕರ



» **ದಾವಣಗೆರೆ**

ನಗರದ ಕಸ್ತೂರಬಾ ಪದವಿ ಪೂರ್ವ ಕಾಲೇಜಿನ್ನಲ್ಲಿಂದು ಎನ್ ಎಸ್ ಎಸ್ ಘಟಕ ಮತ್ತು ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ದಾವಣಗೆರೆ ಇವರ ಸಂಯುಕ್ತ ಆಶ್ರಯದಲ್ಲಿ "ತಂಬಾಕು ಸೇವನೆ ಆರೋಗ್ಯಕ್ಕೆ ಹಾನಿಕರ" ವಿಷಯ ಕುರಿತು ಉಪನ್ಯಾಸ ಕಾರ್ಯಕ್ರಮ ಆಯೋಜಿಸಲಾಯಿತು. ಕಾರ್ಯಕ್ರಮ ಉದ್ಘಾಟಿಸಿದ ದಾವಣಗೆರೆ ಜಿಲ್ಲಾ ತಂಬಾಕು ನಿಯಂತ್ರಣ ಕೋಶ್ ನ ಜಿಲ್ಲಾ ಸಲಹೆಗಾರರಾದ ಶ್ರೀ ಸತೀಶ್ ರವರು ತಂಬಾಕಿನಿಂದ ತಯಾರಿಸುವ ಬೀಡಿ,ಸಿಗರೇಟು, ಗುಟ್ಕಾ ಮೊದಲಾದುವುಗಳ ಸೇವನೆಯಿಂದ ಮಾನವ ಕ್ಯಾನ್ಸರ್ ನಂತಹ ಮಾರಕ ಖಾಯಿಲೆಗೊಳಗಾಗುತಿದ್ದಾನೆ. ಅದರಲ್ಲಿಯೂ ನಮ್ಮ ದೇಶದಲ್ಲಿ ಇಂದು ಹದಿನೈದು ವರ್ಷದಿಂದ ಹದಿನೆಂಟು ವರ್ಷದೊಳಗಿನ ಶೇಕಡಾ 22 ರಷ್ಟು ಯುವ ಪೀಳಿಗೆಯೇ ತಂಬಾಕು ಸೇವನೆಗೆ ಒಳಗಾಗುತ್ತಿರುವುದು ಆಂತಕದ ವಿಷಯವಾಗಿದೆ. ಹೆಚ್ಚಿನ ಯುವಕರು ತಂಬಾಕು ಸೇವನೆಯಿಂದ ಕ್ಯಾನ್ಸರ್ ಮಾತ್ರವಲ್ಲದೆ ಮಾನಸಿಕ ಖಿನ್ನತೆ ಮತ್ತು ಮೆದುಳು ಸಂಬಂಧಿ ಖಾಯಿಲೆಗಳಿಗೆ ಒಳಗಾಗುತ್ತಿದ್ದಾರೆ. ಆದುದರಿಂದ ಯುವಕರು ಮತ್ತು ಎನ್ ಎಸ್ ಎಸ್ ವಿದ್ಯಾರ್ಥಿಗಳಾದ ನೀವುಗಳೆಲ್ಲರೂ ತಂಬಾಕು ಸೇವನೆಯಿಂದ ದೂರವಿರುವುದರ ಜೊತೆಗೆ ನಿಮ್ಮ ಕುಟುಂಬದ ಹಿರಿಯರು ಮತ್ತು ಸಮಾಜದಲ್ಲಿ ತಂಬಾಕು ಸೇವನೆ ಮಾಡುವ ಜನರಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡಬೇಕು ಎಂದು ಕರೆನೀಡಿದರು. ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಲು ಆಗಮಿಸಿದ ಸಾಮಾಜಿಕ ಕಾರ್ಯಕರ್ತ ಶ್ರೀ ದೇವರಾಜ್ ರವರು ಕೆಲವು ಯುವಕರು ಕುತೂಹಲಕ್ಕೆ ಇನ್ನೂ ಕೆಲವು ಯುವಕರು ಸ್ನೇಹಿತರ ಸಹವಾಸದಿಂದ ಸಿಗರೇಟು, ಗುಟ್ಕಾವನ್ನು ಸೇವನೆ ಮಾಡುವ ಮೂಲಕ ಕ್ರಮೇಣ ಅವರಲ್ಲಿ ಚಟವಾಗಿ ಪರಿಣಮಿಸಿ ತಂಬಾಕು ವ್ಯಸನಿಗಳಾಗುತ್ತಾರೆ ಎಂದು ಎಚ್ಚರಿಕೆ ನುಡಿಗಳನ್ನಾಡುವುದರ ಜೊತೆಗೆ ಇದರಿಂದ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಹೇಗೆ ಕ್ಯಾನ್ಸರ್ ನಂತಹ ಖಾಯಿಲೆಗಳಿಗೆ ಬಲಿಯಾಗುತ್ತಿದ್ದಾರೆ ಎಂಬುದನ್ನು ಕಿರು ಚಿತ್ರವನ್ನು ಪ್ರದರ್ಶನ ಮಾಡುವ ಮೂಲಕ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಿದರು. ಸಮಾಜಶಾಸ್ತ್ರ ಉಪನ್ಯಾಸಕರಾದ ಶ್ರೀ ವೀರಪ್ಪನವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಎನ್ ಎಸ್ ಎಸ್ ಕಾರ್ಯಕ್ರಮ ಅಧಿಕಾರಿಗಳಾದ ಎಸ್ ಜಿ ನಾಗರಾಜ್ ರವರು ಪ್ರಾಸ್ತಾವಿಕ ನುಡಿಗಳನ್ನಾಡಿದರು.

### "ಮಕ್ಕಳ ಹಕ್ಕುಗಳು ಮತ್ತು ಪೋಕ್ಸೋ ಕಾಯ್ದೆ" ಕುರಿತು ಕಾನೂನು ಅರಿವು

» **ಚಿತ್ರದುರ್ಗ**

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜು ತುರುವನೂರು ಇವರ ಸಂಯುಕ್ತಾಶ್ರಯದಲ್ಲಿ ಇದೇ ಸೆಪ್ಟೆಂಬರ್ 12ರಂದು ಬೆಳಿಗ್ಗೆ 11 ಗಂಟೆಗೆ ತುರುವನೂರು ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ "ಮಕ್ಕಳ ಹಕ್ಕುಗಳು ಮತ್ತು ಪೋಕ್ಸೋ ಕಾಯ್ದೆ" ಕುರಿತು ಕಾನೂನು ಅರಿವು ನೆರವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಕಾರ್ಯಕ್ರಮ ಉದ್ಘಾಟಿಸುವರು. ತುರುವನೂರು ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಕೆ.ತಿಮ್ಮಯ್ಯ ಅಧ್ಯಕ್ಷತೆ ವಹಿಸುವರು. ಉಪ ಪ್ರಾಂಶುಪಾಲೆ ಕಿರಣ್‌ಮಯಿ ಬಂಡಿಗಡಿ ಉಪಸ್ಥಿತರಿರುವರು. ಮುಖ್ಯ ಅತಿಥಿಗಳಾಗಿ ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ, ಉಪಾಧ್ಯಕ್ಷ ಬಿ.ಎಂ. ಅನಿಲ್ ಕುಮಾರ್, ಪ್ರಧಾನ ಕಾರ್ಯದರ್ಶಿ ಆರ್ ಗಂಗಾಧರ್ ಭಾಗವಹಿಸುವರು. ಉಪ ಪ್ರಧಾನ ಕಾನೂನು ನೆರವು ಅಭಿರಕ್ಷಕ ಎಂ. ಮೂರ್ತಿ ಅವರು ಮಕ್ಕಳ ಹಕ್ಕುಗಳು ಮತ್ತು ಪೋಕ್ಸೋ ಕಾಯ್ದೆ ಕುರಿತು ಉಪನ್ಯಾಸ ನೀಡುವರು ಎಂದು ಪ್ರಕಟಣೆ ತಿಳಿಸಿದೆ.

# ಮೀಸಲಾತಿ ನೀಡದಿದ್ರೆ ಮತದಾನ ಬಹಿಷ್ಕಾರ

» **ಚಳ್ಳಕೆರೆ**

ಕಾಡುಗೊಲ್ಲ ಸಮಾಜ ಎಸ್ಟಿ ಮೀಸಲಾತಿ ಪಡೆಯಲು ಒಗ್ಗೂಡಬೇಕಿದೆ. ಮೌಢ್ಯಗಳಿಂದ ಹೊರಬಂದು, ಸರ್ಕಾರದ ಸೌಲಭ್ಯ ಪಡೆಯುವತ್ತ ಮುನ್ನಡೆಯಬೇಕು ಎಂದು ಮಾಜಿ ಬಿಬಿಎಂಪಿ ಸದಸ್ಯ, ಕಾಡುಗೊಲ್ಲ ಸಂಘದ ರಾಜ್ಯಾಧ್ಯಕ್ಷ ರಾಜಣ್ಣ ಹೇಳಿದರು.

ತಾಲ್ಲೂಕಿನತಳಕುಹೋಬಳಿಯತಳುಕಿನ ಗುಡ್ಡ(ಎತ್ತಪ್ಪನ ಗುಡ್ಡ)ದಲ್ಲಿ ಏರ್ಪಡಿಸಿದ್ದ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ಇದಕ್ಕೂ ಮುನ್ನ ಎತ್ತಪ್ಪನ ಗುಡ್ಡದಲ್ಲಿ ಕಾಡುಗೊಲ್ಲ ಸಂಪ್ರದಾಯದಂತೆ ಪೂಜೆ ಸಲ್ಲಿಸಿದ ಅವರು, ಪೌಳಿಯನ್ನು ಸುಮಾರು 3.50ಕೋಟಿ ವೆಚ್ಚದಲ್ಲಿ ಆಧುನಿಕ ಶೈಲಿಯಲ್ಲಿ ನೂತನವಾಗಿ ನಿರ್ಮಿಸಿ ಪ್ರವಾಸಿ ತಾಣ ಮಾಡುವ ಇಂಗಿತ ವ್ಯಕ್ತಪಡಿಸಿದರು.

ಇಂದು ರಾಜ್ಯದ 12 ಜಿಲ್ಲೆಯ, 42 ತಾಲ್ಲೂಕುಗಳ ಕಾಡುಗೊಲ್ಲ ಸಂಘದ ಅಧ್ಯಕ್ಷ, ಉಪಾಧ್ಯಕ್ಷ, ಸದಸ್ಯ, ಚಿಂತಕರು, ಸಾಹಿತಿಗಳು ಸಮುದಾಯದ ಬಂಧುಗಳು ಆಗಮಿಸಿ ಸಂಘಟನೆಗೆ ಮುನ್ನುಡಿ ಬರೆದಿದ್ದಾರೆ. ನಮ್ಮ ಸಮಾಜವನ್ನು ಮೌಢ್ಯ, ಕಂದಚಾರದಿಂದ ಹೊರ ತರಲು ಎಲ್ಲರೂ ಶ್ರಮಿಸಬೇಕು. ಸರ್ಕಾರ ಪ್ರತಿಯೊಂದು ಹಟ್ಟಿಯಲ್ಲೂ ಸಮುದಾಯ ಭವನ,



ಹಟ್ಟಿಗಳ ಅಭಿವೃದ್ಧಿ ಸೌಲಭ್ಯ ಮತ್ತು ಕಾಡುಗೊಲ್ಲ ಸಮಾಜಕ್ಕೆ ಕಾಡುಗೊಲ್ಲ ಎಂಬ ಜಾತಿಪ್ರಮಾಣ ಪತ್ರ ನೀಡಲು ಸರ್ಕಾರ ಮೇಲೆ ಒತ್ತಡ ಹೇರಲು ನಾವೆಲ್ಲ ಒಂದಾಗಬೇಕು. ಸಮಾಜದ ಬಂಧುಗಳು ಮಕ್ಕಳಿಗೆ ಶಿಕ್ಷಣ ಕೊಡಿಸುವ ಮೂಲಕ ಪ್ರಬುದ್ಧ ಸಮಾಜ ಕಟ್ಟಬೇಕು ಎಂದರು.

ಸರ್ಕಾರ ನಮ್ಮ ನ್ಯಾಯುತವಾದ ಬೇಡಿಕೆಗಳನ್ನು ಈಡೇರಿಸದೇ ಹೋದಲ್ಲಿ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಎಲ್ಲರೂ ಸೇರಿದಂತೆ ಮತದಾನವನ್ನು ಬಹಿಷ್ಕರಿಸಲು ಕರೆ ನೀಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕಾಡುಗೊಲ್ಲ ಸಂಘದ ಗೌರವಾಧ್ಯಕ್ಷ ಮೀಸೆಮಹಲಿಂಗಪ್ಪ, ಕಳೆದ ಹಲವಾರು ವರ್ಷಗಳಿಂದ ಕಾಡುಗೊಲ್ಲ ಸಮುದಾಯಕ್ಕೆ ಸರ್ಕಾರ ಸಮಾನತೆಯನ್ನು ನೀಡುವಲ್ಲಿ ಹಿಂದಿದೆ. ಸಮುದಾಯದ ಯಾವುದೇ ಬೇಡಿಕೆಗಳನ್ನು ಗಂಭೀರವಾಗಿ ಪರಿಗಣಿಸಿಲ್ಲ. ಬೇರೆ ಎಲ್ಲಾ ಸಮುದಾಯಕ್ಕೆ ಹೋಲಿಸಿದರೆ ಕಾಡುಗೊಲ್ಲ ಸಮುದಾಯ ಮಾತ್ರ ಹಿನ್ನಡೆ ಅನುಭವಿಸುತ್ತಿದೆ. ಆದರೆ, ಇದೇ ರೀತಿ ಮುಂದುವರೆದರೆ ನಮ್ಮ ಜನಾಂಗ ಬೇರೆ ಜನಾಂಗದಂತೆ ಅಭಿವೃದ್ಧಿಪಥದತ್ತ ಹೆಜ್ಜೆ ಇಡಲು ಸಾಧ್ಯವಾಗುವುದಿಲ್ಲ. ರಾಜಕೀಯ ಕ್ಷೇತ್ರವೂ ಸೇರಿದಂತೆ ಎಲ್ಲಾ ಕ್ಷೇತ್ರದಲ್ಲೂ ಈ ಸಮುದಾಯಕ್ಕೆ ಸೂಕ್ತ ಪ್ರಾತಿನಿತ್ಯ ಸಿಗಲೇಬೇಕು ಎಂದರು.

ಕಾರ್ಯಕ್ರಮಕ್ಕೂ ಮುನ್ನ ಕಾಡುಗೊಲ್ಲ ಜನಾಂಗದ ದಾಸಪ್ಪ, ಪೂಜಾರಿಗಳು ರೂಮಾಲು, ಕೋಲು, ಕಂಬಳಿ ಹೊತ್ತು, ಶಂಖ, ಜಾಗಟೆ, ಗಂಟೆ ಬಾರಿಸುತ್ತಾ ಪೌಳಿಗೆ(ದೇವರು ಇರುವ ಸ್ಥಳ) ಆಗಮಿಸಿದರು. ಈ ಸಂದರ್ಭದಲ್ಲಿ ಸೇರಿದ್ದ ಎಲ್ಲರೂ ಭಕ್ತಿಯಿಂದ ಕೈಮುಗಿದು ಸ್ವಾಗತಿಸಿದರು.

ಜಿಲ್ಲಾಧ್ಯಕ್ಷ ರಾಜಕುಮಾರ್ ಮಾತನಾಡಿ, ಕಾಡುಗೊಲ್ಲ ಸಮುದಾಯ ಸಂಘಟನೆಗೆ ಹೆಚ್ಚು ಒತ್ತು ನೀಡಬೇಕಿದೆ. ಈ ಹಿನ್ನೆಲೆಯಲ್ಲಿ ಜಿಲ್ಲಾದ್ಯಂತ ಈಗಾಗಲೇ ಪ್ರವಾಸ ಕೈಗೊಂಡು ಸಮುದಾಯದವನ್ನು ಜಾಗೃತಗೊಳಿಸಲಾಗುತ್ತಿದೆ. ಚಳ್ಳಕೆರೆ ನಗರದಲ್ಲೂ ಸಹ ಇಂದು ಕಾಡುಗೊಲ್ಲ ಸಮುದಾಯದ ಕಚೇರಿ ಆರಂಭ ಮಾಡಲಾಗಿದೆ. ಸಮುದಾಯದಲ್ಲಿರುವ ಯುವಕರು ಹಾಗೂ ಬುದ್ದಿ ಜೀವಿಗಳು ಗ್ರಾಮೀಣ ಭಾಗಗಳ ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಕಾಡುಗೊಲ್ಲ ಸಂಘದ ತಾಲ್ಲೂಕು ಅಧ್ಯಕ್ಷ ಬೂದಿಹಳ್ಳಿರಾಜಣ್ಣ, ಸಮುದಾಯದ ಹಿರಿಯ ಮುಖಂಡ ಎಂ.ಕರಿಯಪ್ಪ, ಬಿ.ವಿ.ಸಿರಿಯಣ್ಣ, ಬಾಲರಾಜು, ತಾಲ್ಲೂಕು ಅಧ್ಯಕ್ಷ ಟಿ.ರವಿಕುಮಾರ್, ರಾಜ್ಯ ಮುಖಂಡ ದೊಡ್ಡನಾಗಯ್ಯ, ಜೆ.ಸಿ.ಶಶಿಧರ, ರಂಗಸ್ವಾಮಿ, ದೇವರಾಜು, ಗೋವಿಂದಪ್ಪ, ಸುಂಕಪ್ಪ. ಬಸವರಾಜು ಮುಂತಾದವರು ಪಾಲ್ಗೊಂಡಿದ್ದರು.

# ಆತ್ಮಹತ್ಯೆ ಪರಿಹಾರವಲ್ಲ ಮುಕ್ತ ಮನಸಿನಿಂದ ಎಲ್ಲದಕ್ಕೂ ಪರಿಹಾರವಿದೆ: ನ್ಯಾ.ರಾಜೇಶ್ವರಿ

» **ದಾವಣಗೆರೆ**

ಎಲ್ಲಾ ಸಮಸ್ಯೆಗಳಿಗೂ ಆತ್ಮಹತ್ಯೆ ಒಂದೇ ಪರಿಹಾರವಲ್ಲ. ಮುಕ್ತ ಮನಸಿನಿಂದ ಚರ್ಚೆ ಮಾಡುವ ಮೂಲಕ ಸಮಸ್ಯೆಗೆ ಪರಿಹಾರ ಕಂಡುಕೊಂಡು ಆತ್ಮಹತ್ಯೆ ಅಲೋಚನೆಯಿಂದ ಹೊರಬಾರಬಹುದೆಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ರಾಜೇಶ್ವರಿ ಎನ್ ಹೆಗಡೆ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ, ಚಿಗಟೇರಿ ಜಿಲ್ಲಾ ಆಸ್ಪತ್ರೆ ಮನೋವೈದ್ಯಕೀಯ ವಿಭಾಗ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ವತಿಯಿಂದ ಸೆ.11 ರಂದು ಜಿಲ್ಲಾ ಕಾರಾಗೃಹ ಇಲಾಖೆಯ ಸಭಾಂಗಣದಲ್ಲಿ "ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆಯನ್ನು ಕ್ರಿಯೆಯ ಮೂಲಕ ಭರವಸೆಯನ್ನು ಮೂಡಿಸೋಣ ಎಂಬ ಘೋಷಣೆಯೊಂದಿಗೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತಾನಾಡಿ, 2003 ರಿಂದ ವಿಶ್ವ ಸಂಸ್ಥೆಯಲ್ಲಿ ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಪ್ರಸ್ತುತ ದಿನ ಮಾನಗಳಲ್ಲಿ ವಿವಿಧ ಒತ್ತಡಗಳ ಕಾರಣಗಳಿಂದ ಆತ್ಮಹತ್ಯೆ ಪ್ರಕರಣಗಳು ವರದಿಯಾಗುತ್ತಿರುವುದು ವಿಷಾದನೀಯ. ಆತ್ಮಹತ್ಯೆಗೆ ಶರಣಾಗುವುದು ಮಹಾಪಾಪ, ಏನೇ ಇದ್ದರೂ ಕೂಡ ಎದುರಿಸಿ ಹೋರಾಡಿ ಗೆಲ್ಲಬೇಕು. ನಮ್ಮನ್ನು ನಂಬಿಕೊಂಡು ಕುಟುಂಬಸ್ಥರು




ಇರುತ್ತಾರೆ. ಅವರ ಬಗ್ಗೆಯಾದರು ಒಮ್ಮೆ ಯೋಚನೆ ಮಾಡಬೇಕು, ಆಗಲಾದರೂ ಮನಸ್ಸು ಬದಲಾಗುತ್ತದೆ. ಒತ್ತಡದಿಂದ ಮುಕ್ತರಾಗಲು ಧ್ಯಾನ, ಯೋಗ ಪ್ರಾಣಯಾಮ ಮಾಡಿದರೆ ಸಹಾಯಕವಾಗುತ್ತದೆ ಎಂದು ಸಲಹೆ ನೀಡಿದರು. ಜಿಲ್ಲೆಯಾದ್ಯಂತ ಮನೋವೈದ್ಯರ ತಂಡವು ಮಾನಸಿಕ ಆರೋಗ್ಯ ಶಿಬಿರವನ್ನು ಏರ್ಪಡಿಸಿ, ಅಲ್ಲಿ ಮಾನಸಿಕ ಅಸ್ವಸ್ಥರಿಗೆ ಚಿಕಿತ್ಸೆ, ಆಪ್ತಸಮಾಲೋಚನೆ, ನೀಡುತ್ತಿರುವುದು ಶ್ಲಾಘನೀಯ ಎಂದು ತಿಳಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಎಂ, ಕರೆಣ್ಣವರ ಮಾತನಾಡಿ. ಆತ್ಮಹತ್ಯೆ ಎಂಬುದು ಸ್ವಂತಕ್ಕೆ ಮಾಡಿಕೊಳ್ಳುವ ಮಹಾ ಮೋಸ. ಆತ್ಮಹತ್ಯೆಗಳನ್ನು ತಡೆಗಟ್ಟಲು ನಾವು ಆಧ್ಯಾತ್ಮ ಚಟುವಟಿಕೆಗಳ ಕಡೆಗೆ ಒಲವು ತೋರುವುದು ಅತ್ಯವಶ್ಯಕವಾಗಿದೆ. ಹಿರಿಯರ ನುಡಿಗಳು, ಪುರಾಣಗಳು, ಧ್ಯಾನ, ಯೋಗದಿಂದ ಮನುಷ್ಯರು ಸಿಟ್ಟು, ಚಂಚಲತೆ ಹಾಗೂ ಗೊಂದಲಗಳಿಂದ ಹೊರಬರಲು ಮತ್ತು ಮನಸ್ಸನ್ನು ಶಾಂತಯುತವಾಗಿ ಇಟ್ಟುಕೊಳ್ಳಲು ಸಾಧ್ಯವಾಗುತ್ತದೆ. ಸೃಷ್ಠಿಯಲ್ಲಿ ಕೋಟ್ಯಾಂತರ ಜೀವಿಗಳಿವೆ ಪ್ರತಿಯೊಂದು ಜೀವಿಯು ಹುಟ್ಟಿದ ಮೇಲೆ ತನ್ನದೇ ಆದ ಕರ್ತವ್ಯವನ್ನು ನಿರ್ವಹಿಸುತ್ತವೆ, ಅದೇ ರೀತಿಯಾಗಿ ಮನುಷ್ಯ ಇತರೆ ಜೀವಿಗಳಿಗಿಂತ ಹೆಚ್ಚು ಆಲೋಚಿಸುವ, ಸರಿ, ತಪ್ಪು ತಿಳಿದುಕೊಳ್ಳುವ ವಿಶಿಷ್ಟವಾದ ಶಕ್ತಿಯನ್ನು ಪಡೆದುಕೊದ್ದಾನೆ,. ಆದ್ದರಿಂದ ಜೀವನದಲ್ಲಿ ತನ್ನ ಕರ್ತವ್ಯವೇನು ಎಂಬುದನ್ನು ಅರಿತು ಬದುಕಬೇಕು, ಸಮಜದಲ್ಲಿ ಸುಧಾರಣೆ ತರುವಂತಹ ಕೆಲಸವನ್ನು ಮಾಡಬೇಕು.

ಬಂಧಿ ಖಾನೆಯಲ್ಲಿರುವವರು ತಮ್ಮ ಮುಂದಿನ ಭವಿಷ್ಯದ ಕುರಿತು ಯೋಚಿಸಬೇಕು, ತಂದೆ ತಾಯಿ ಅಥವಾ ಕುಟುಂಬದವರು ನಮ್ಮನ್ನು ಬೆಳೆಸಲು ಎಷ್ಟು ಕಷ್ಟ ಪಟ್ಟಿರುತ್ತಾರೆ ಈ ನಿಟ್ಟಿನಲ್ಲಿ ಅವರ ನೋವುಗಳನ್ನು ಅರ್ಥ ಮಾಡಿಕೊಳ್ಳಬೇಕು. ಸಿಟ್ಟಿನ ಕೈಗೆ ಬುದ್ಧಿಯನ್ನು ಕೊಟ್ಟು ಆತ್ಮಹತ್ಯೆಗೆ ಪ್ರಯತ್ನಿಸಬಾರದು ಎಂದರು.

ಜಿಲ್ಲಾ ಕುಷ್ಠರೋಗ ನಿವಾರಣಾಧಿಕಾರಿ ಡಾ ಮಂಜುನಾಥ ಎಲ್ ಪಾಟೀಲ್. ಮಾತನಾಡಿ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದಿಂದ ತಾಲ್ಲೂಕುವಾರು ಮನೋಚೈತನ್ಯ ಕಾರ್ಯಕ್ರಮ ರೂಪಿಸಿ ಜಿಲ್ಲೆಯಲ್ಲಿ ಒತ್ತಡ ಮುಕ್ತರಾಗಿಸಲು ಎಲ್ಲಾ ಇಲಾಖೆ ಸೇರಿದಂತೆ ಸಮುದಾಯದ ಜನರಿಗೆ ಮಾನಸಿಕ ಆರೋಗ್ಯದ ಬಗ್ಗೆ ಅರಿವು ಮೂಡಿಸಲಾಗುತ್ತಿದೆ. ಜಿಲ್ಲೆಯಲ್ಲಿ ಮಾನಸಿಕ ಅಸ್ವಸ್ಥರನ್ನು ಗುರುತಿಸಿ, ಪ್ರಾಥಮಿಕ ಹಂತದಲ್ಲಿಯೇ ಚಿಕಿತ್ಸೆ ನೀಡುತ್ತಿದ್ದೇವೆ. ಜಿಲ್ಲಾ ಕಾರಾಗೃಹ ಅಧೀಕ್ಷಕರಾದ ಭಾಗೀರಥಿ. ಎಲ್, ಜೆ.ಜೆ.ಎಂ ವೈದ್ಯಕೀಯ ಕಾಲೇಜಿನ ಮನೋವೈದ್ಯಕೀಯ ವಿಭಾಗದ ಹಿರಿಯ ಪ್ರಾಧ್ಯಾಪಕರು ಮತ್ತು ಪೂರ್ವ ಮುಖ್ಯಸ್ಥರಾದ ಡಾ.ಕೆ.ನಾಗರಾಜ್ ರಾವ್ ಹಾಗೂ ಕಾರಾಗೃಹದ ಪೋಲೀಸ್ ಸಿಬ್ಬಂದಿಗಳು ಉಪಸ್ಥಿತಿರಿರುವರು.

### ಭಕ್ತರ ಇಷ್ಟಾರ್ಥಗಳನ್ನು ತಪ್ಪದೆ ನೆರವೇರಿಸುವ ಮಹಾನ್ ದೈವ ಶಕ್ತಿ ಶ್ರೀಕೃಷ್ಣ ಪರಮಾತ್ಮ: ಡಿ.ಸುಧಾಕರ್



» **ಚಳ್ಳಕೆರೆ**

ನಗರದ ಇಸ್ಕಾನ್ ಭಕ್ತಮಂಡಳಿವತಿಯಿಂದ ಇಲ್ಲಿ ದತ್ತಮಂದಿರದಲ್ಲಿ ಭಕ್ತವೃಂದದ ವತಿಯಿಂದ ಶ್ರೀಕೃಷ್ಣ ಜಯಂತಿ ಕಾರ್ಯಕ್ರಮವನ್ನು ಅದ್ದೂರಿಯಾಗಿ ಆಚರಿಸಲಾಯಿತು. ಹಲವಾರು ಮಕ್ಕಳು ಶ್ರೀಕೃಷ್ಣನ ವೇಷಧರಿಸಿ ಎಲ್ಲರ ಗಮನ ಸೆಳೆದರು.

ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿ, ಶ್ರೀಕೃಷ್ಣನ ಅನುಗ್ರಹ ಪ್ರತಿಯೊಬ್ಬ ಭಕ್ತರಿಗೂ ದೊರೆಯುತ್ತದೆ. ಭಗವಾನ್ ಶ್ರೀಕೃಷ್ಣ ತನ್ನ ನಂಬಿದ ಭಕ್ತರಿಗೆ ತಪ್ಪದೆ ಆಶೀರ್ವಾದ ಮೂಲಕ ಅನುಗ್ರಹಿಸುತ್ತಾನೆ. ಮಕ್ಕಳು ಸಹ ಆಸಕ್ತಿಯಿಂದ ಶ್ರೀಕೃಷ್ಣನ ವೇಷವನ್ನು ಧರಿಸುವಮೂಲಕ ಶ್ರೀಕೃಷ್ಣನೇ ಧರೆಗೆ ಇಳಿದಿದ್ದಾನೆಂಬ ಭಾವನೆ ಮೂಡುವಂತೆ ಮಾಡಿದ್ದಾರೆಂದು ಸಂತಸ ವ್ಯಕ್ತಪಡಿಸಿದರು. ಶಾಸಕ ಟಿ.ರಘುಮೂರ್ತಿ ಮಾತನಾಡಿ, ಶ್ರೀಕೃಷ್ಣ ಜಯಂತಿ ಕಾರ್ಯಕ್ರಮ ಇಂದು ವಿಶೇಷ ಮಹತ್ವ ಪಡೆಯುತ್ತಿದೆ. ಕಾರಣ, ಸಮಾಜದ ಎಲ್ಲಾ ವರ್ಗಕ್ಕೂ ಶ್ರೀಕೃಷ್ಣ ಆರಾಧ್ಯ ದೈವವಾಗಿದ್ದಾನೆ. ಕೃಷ್ಣನ ಬಗ್ಗೆ ಎಲ್ಲರಲ್ಲೂ ವಿಶೇಷವಾದ ಗೌರವ ಮೂಡುತ್ತಿದೆ. ಚಳ್ಳಕೆರೆ ನಗರವೂ ಸೇರಿದಂತೆ ತಾಲ್ಲೂಕಿನಾದ್ಯಂತ ಶ್ರೀಕೃಷ್ಣ ಜಯಂತಿ ಕಾರ್ಯಕ್ರಮವನ್ನು ಸಂಭ್ರಮ, ಸಡಗರಗಳಿಂದ ಆಚರಿಸಲಾಗಿತ್ತಿದೆ. ಡಿ.ಉಪ್ಪಾರಹಟ್ಟಿಯ ಕೃಷ್ಣ ಜಯಂತಿ ಕಾರ್ಯಕ್ರಮದಲ್ಲಿ ಸಮುದಾಯದ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಶ್ರೀಕೃಷ್ಣನ ಆರಾಧಿಸಿದ್ದಾರೆಂದರು.

ಅರ್ಚಕ ವೆಂಕಟೇಶ್, ಗಂಗಾಧರ್‌ಗುಪ್ತ, ಎನ್.ಗೋಪಿನಾಥ, ಚಂದ್ರು, ಮಂಜುನಾಥ, ನೇತಾಜಿ ಪ್ರಸನ್ನ ಮುಂತಾದವರು ಉಪಸ್ಥಿತರಿದ್ದರು.

### ವಿದ್ಯಾರ್ಥಿಕೂಟದ ವಾರ್ಷಿಕೋತ್ಸವ

**ದಾವಣಗೆರೆ:** ದಾವಣಗೆರೆ ವಿಶ್ವವಿದ್ಯಾನಿಲಯ ಸ್ನಾತಕೋತ್ತರ ವಿದ್ಯಾರ್ಥಿಕೂಟದ ವತಿಯಿಂದ ಸೆಪ್ಟೆಂಬರ್ 13 ರಂದು ಸಂಜೆ 4.30 ಗಂಟೆಗೆ ವಿಶ್ವವಿದ್ಯಾನಿಲಯದ ಜ್ಞಾನ ಸೌಧದಲ್ಲಿ ಶಿವಗಂಗೋತ್ರಿ ವಾರ್ಷಿಕೋತ್ಸವ, ಸಾಂಸ್ಕೃತಿಕ ಹಾಗೂ ಕ್ರೀಡಾ ಸ್ಪರ್ಧೆಗಳ ವಿಜೇತರಿಗೆ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ. ಗಣಿ, ಭೂವಿಜ್ಞಾನ ಮತ್ತು ತೋಟಗಾರಿಕೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

**ಪ್ರಮುಖ ಸುದ್ದಿ**

# ನೌಕರರ ಸೇವೆ ಎಲ್ಲಾ ವರ್ಗದವರಿಗೂ ಪೂರಕವಾಗಿರಲಿ

» **ಹೊಸದುರ್ಗ**

ತಾಲ್ಲೂಕಿನ ಕೆಲ ಸರ್ಕಾರಿ ಕಚೇರಿಗಳಲ್ಲಿ, ನೌಕರರು ಕಾರ್ಯನಿರ್ವಹಿಸುವುದರಲ್ಲಿ ಲೋಪದೋಷಗಳು ಕಂಡು ಬಂದರೆ, ತಕ್ಷಣವೇ ಸರಿಪಡಿಸಿಕೊಳ್ಳಿ. ಕಚೇರಿಗೆ ಸಮಯಕ್ಕೆ ಸರಿಯಾಗಿ ಬರಬೇಕು. ನೌಕರರ ಸೇವೆ ಬಡವರು ಮತ್ತು ಎಲ್ಲಾ ವರ್ಗದವರಿಗೂ ಪೂರಕವಾಗಿರಬೇಕು ಎಂದು ಶಾಸಕ ಬಿ ಜಿ ಗೋವಿಂದಪ್ಪ ನೌಕರರಿಗೆ ಕಿವಿಮಾತು ಹೇಳಿದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ವತಿಯಿಂದ ಸುವರ್ಣ ಮಹೋತ್ಸವ ಅಂಗವಾಗಿ ಪಟ್ಟಣದ ಹೇಮಾವತಿ ಸಮುದಾಯ ಭವನ ಆವರಣದಲ್ಲಿ ಆಯೋಜಿಸಿದ್ದ 'ಕ.ರಾ.ಸ.ನೌ ಸಂಘದ ಸಭಾಭವನ ಶಂಕುಸ್ಥಾಪನೆ ಮತ್ತು ಸರ್ವಸದಸ್ಯರ ಮಹಾಸಭೆ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸಂಘಗಳು ನಿಮ್ಮ ಹಾಗೂ ತಾಲ್ಲೂಕಿನ ಶ್ರೇಯೋಭಿವೃದ್ಧಿಗೆ ಪೂರಕವಾಗಿರಬೇಕು. ನೌಕರರ ಸೇವೆ ಬಡವರಿಗೆ ತಲುಪಬೇಕು. ಕಚೇರಿಗಳಲ್ಲಿ ಬಡವರ ಕೆಲಸ ಕಾರ್ಯ ತುರ್ತಾಗಿ ಮಾಡಿಕೊಡಬೇಕು.

ಪಟ್ಟಣದಲ್ಲಿ ನಿರ್ಮಿಸುತ್ತಿದ್ದಾರೆ



ಸಭಾಭವನವನ್ನು 3-4 ತಿಂಗಳಲ್ಲಿ ಮುಗಿಸಿ, ಸಾರ್ವಜನಿಕ ಸೇವೆಗೆ ಅವಕಾಶ ಕಲ್ಪಿಸಲಾಗುವುದು, ಇದರ ಸದುಪಯೋಗ ಪಡೆದುಕೊಳ್ಳಬೇಕು. ಇಲ್ಲಿನವಿದ್ಯಾರ್ಥಿಗಳಿಗೆ ಅನುಕೂಲವಾಗಲು ಒಂದು ಸಿಇಟಿ ಕೇಂದ್ರ ತೆರೆಯಿರಿ. ಬಡ ಮಕ್ಕಳ ವಿದ್ಯಾಭ್ಯಾಸಕ್ಕೆ ಅನುಕೂಲ ಮಾಡಿಕೊಡಿ, ಅಗತ್ಯ ನೆರವು ನೀಡುವುದಾಗಿ ಶಾಸಕರು ತಿಳಿಸಿದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ. ಎಸ್. ಷಡಾಕ್ಷರಿ ಮಾತನಾಡಿ, ಶಾಸಕರು ಮತ್ತು ಕಾರ್ಯಾಂಗ ಒಟ್ಟಾಗಿ ಹೋದರೆ ಪ್ರಗತಿ ಕಾಣಬಹುದು. ನಿಕಟ ಸಂಬಂಧ ಸಂಪರ್ಕ. ರಾಜ್ಯದಲ್ಲಿ ಸಂಕಷ್ಟದ ಸಮಯದಲ್ಲಿ ಸರ್ಕಾರಿ ನೌಕರರು ಅಪಾರ ಸಹಕಾರ ನೀಡಿದ್ದಾರೆ.

ಏಳನೇ ವೇತನ ಆಯೋಗ ನವೆಂಬರ್ ತಿಂಗಳಲ್ಲಿ ವರದಿ ಸಲ್ಲಿಸಲಿದೆ. ಸರ್ಕಾರದ ತೀರ್ಮಾನ ಆದರಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು. ವೇತನವನ್ನು ಶೇ. 30-40 ಕ್ಕೆ ಹೆಚ್ಚಿಸುವುದು, ಎನ್.ಪಿ.ಎಸ್ ಜಾರಿ, ನೌಕರರ ಕುಟುಂಬದವರಿಗೆ ಉಚಿತ ಚಿಕಿತ್ಸೆ ನೀಡಲು ಹೆಲ್ ಕೇರ್, ವರ್ಗಾವಣೆ ಸಮಸ್ಯೆ ನಿವಾರಣೆ ಸೇರಿದಂತೆ ಹಲವು ಸೌಲಭ್ಯಗಳನ್ನು ಪಡೆಯಲು ಸರ್ಕಾರಕ್ಕೆ ಒತ್ತಡ ತರಲಾಗುವುದು. ಹೊಸದುರ್ಗದಲ್ಲಿ ಪ್ರತಿ ವರ್ಷ ಒಬ್ಬರು ಅಧ್ಯಕ್ಷರು ಆಗುವ ಪದ್ಧತಿ ಇದೆ. ಇದರಿಂದ ಅಭಿವೃದ್ಧಿ ಕುಂಠಿತವಾಗಬಹುದು. ಹೀಗಾಗಿ ಮುಂದಿನ ದಿನಗಳಲ್ಲಿ ಐದು ವರ್ಷದ ಅವಧಿವರೆಗೂ ಅಧ್ಯಕ್ಷರ ಆಯ್ಕೆ ನಡೆಯಲಿದೆ ಎಂದರು.

ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಆರ್ ಲಕ್ಷ್ಮಯ್ಯ ಮಾತನಾಡಿ, ಹೊಸದುರ್ಗದಲ್ಲಿ ಸರ್ಕಾರಿ ನೌಕರರ ಸಂಘ 1972 ರಲ್ಲಿ ಆರಂಭವಾಗಿದ್ದು, 50 ವರ್ಷ ಪೂರೈಸಿದೆ. ಕ್ರೀಡಾಕೂಟಕ್ಕೆ ಸಹಕಾರ, ಕೋವಿಡ್ ಸಂದರ್ಭದಲ್ಲಿ ಆಹಾರ ಕಿಟ್ ನೀಡುವುದು ಸೇರಿದಂತೆ ಹಲವು ಸಮಾಜಮುಖಿ ಕಾರ್ಯಕ್ರಮಗಳಲ್ಲಿ ತೊಡಗಿದೆ ಎಂದರು.

ಈ ವೇಳೆ ರಾಜ್ಯ ಉಪಾಧ್ಯಕ್ಷ ಮೋಹನ್ ಕುಮಾರ್, ಜಿಲ್ಲಾಧ್ಯಕ್ಷ ಕೆ.ಟಿ ತಿಮ್ಮಾರೆಡ್ಡಿ, ರಾಜ್ಯ ಗೌರವಾಧ್ಯಕ್ಷ ಲೋಕೇಶ್ ಸೇರಿದಂತೆ ತಾಲ್ಲೂಕು ಮಟ್ಟದ ಅಧಿಕಾರಿಗಳು, ಸಂಘದ ಪದಾಧಿಕಾರಿಗಳು, ನೌಕರರು, ನಿವೃತ್ತ ನೌಕರರು ಸೇರಿದಂತೆ ಹಲವರಿದ್ದರು.

## ಫಾಸ್ಟ್ ನ್ಯೂಸ್

### ಸೆ. 14 ರಿಂದ 21 ರವರೆಗೆ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟ

ದಾವಣಗೆರೆ: ಪ್ರಸಕ್ತ ಸಾಲಿನ ಜಿಲ್ಲೆಯ ಆರು ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟವನ್ನು ತಾಲ್ಲೂಕುವಾರು ಆಯೋಜಿಸಲಾಗಿದೆ.ಸೆಪ್ಟೆಂಬರ್ 14 ರಂದು ಹರಿಹರ ತಾಲ್ಲೂಕಿಗೆ ಸಂಬಂಧಿಸಿದಂತೆ ರಾಜನಹಳ್ಳಿಯ ಶ್ರೀ ವಾಲ್ಮೀಕಿ ವಸತಿಯುತ ಪ್ರೌಢಶಾಲೆ, ಹರಿಹರ, 15 ರಂದು ಹೊನ್ನಾಳಿ ತಾಲ್ಲೂಕಿಗೆ ಸಂಬಂಧಿಸಿದಂತೆ ತಾಲ್ಲೂಕು ಕ್ರೀಡಾಂಗಣ, ಹೊನ್ನಾಳಿ, 16 ರಂದು ನ್ಯಾಮತಿ ತಾಲ್ಲೂಕಿಗೆ ಸಂಬಂಧಿಸಿದಂತೆ ತಾಲ್ಲೂಕು ಕ್ರೀಡಾಂಗಣ ಹೊನ್ನಾಳಿ, 16 ರಂದು ಚನ್ನಗಿರಿ ತಾಲ್ಲೂಕಿಗೆ ಸಂಬಂಧಿಸಿದಂತೆ ತಾಲ್ಲೂಕು ಕ್ರೀಡಾಂಗಣ ಚನ್ನಗಿರಿ, 20 ರಂದು ಜಗಳೂರು ತಾಲ್ಲೂಕಿಗೆ ಸಂಬಂಧಿಸಿದಂತೆ ಜಗಳೂರಿನ ಬೇಡರ ಕಣ್ಣಪ್ಪ ಪ್ರೌಢ ಶಾಲೆ ಹಾಗೂ 21 ರಂದು ದಾವಣಗೆರೆ ತಾಲ್ಲೂಕಿಗೆ ಸಂಬಂಧಿಸಿದಂತೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಕ್ರೀಡಾಕೂಟಗಳು ನಡೆಯಲಿವೆ.ಕ್ರೀಡಾಕೂಟದಲ್ಲಿ ರಕ್ಷಣಾ ಪಡೆ ಮತ್ತು ಅರೆ ರಕ್ಷಣಾ ಪಡೆಗೆ ಸೇರಿದ ಕ್ರೀಡಾಪಟುಗಳು ಭಾಗವಹಿಸುವಂತಿಲ್ಲ. ಒಬ್ಬ ಕ್ರೀಡಾಪಟು ಅಥವಾ ತಂಡದ ಯಾವುದೇ ತಾಲೂಕಿನಲ್ಲಿ ಒಂದು ಬಾರಿ ಭಾಗವಹಿಸಿದ ನಂತರ ಬೇರೆ ಯಾವುದೇ ತಾಲೂಕಿನ ಅಥವಾ ಜಿಲ್ಲೆಯ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸಲು ಅವಕಾಶವಿಲ್ಲ. ತಾಲ್ಲೂಕು ಮಟ್ಟದ ವೈಯಕ್ತಿಕ ಸ್ಪರ್ಧೆಗಳಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದ ಹಾಗೂ ಗುಂಪು ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ ಪಡೆದು ತಂಡಮ್ಮ ಮಾತ್ರ ಜಿಲ್ಲಾ ಮಟ್ಟದ ತಟ್ಟೆಗೆ ಕಳುಹಿಸಲಾಗುತ್ತದೆ.ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಯಾವುದೇ ಪ್ರಯಾಣ ಭತ್ಯೆ, ದಿನಭತ್ಯೆ ನೀಡಲಾಗುವುದಿಲ್ಲ ಎಂದು ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಕೆ.ಆರ್. ಜಯಲಕ್ಷ್ಮೀಬಾಯಿ ತಿಳಿಸಿದ್ದಾರೆ.

### ನೆಲಜಲದ ಬಗ್ಗೆ ಜಾಗೃತಿ ಮೂಡಿಸಲು ನಮ್ಮ ಮಣ್ಣು, ನಮ್ಮ ದೇಶ ಕಾರ್ಯಕ್ರಮ




» **ಚಳ್ಳಕೆರೆ**

ವಿಶ್ವದ ಇತಿಹಾಸದಲ್ಲಿ ಪುಣ್ಯ ಭೂಮಿ ಎಂದರೆ ಅದು ನಮ್ಮ ಭಾರತ ಎಂದು ಹೆಮ್ಮೆಯಿಂದ ಹೇಳಬಹುದು. ಆದರೆ, ಇತ್ತೀಚಿನ ದಿನಗಳಲ್ಲಿ ಕೆಲವೊಂದು ಶಕ್ತಿಗಳು ನಮ್ಮ ಸಮಾಜದ ಪರಂಪರೆ, ಸಂಸ್ಕೃತಿಕ, ಸಂಸ್ಕಾರವನ್ನು ಅರಿಯದೆ ಮಾತನಾಡುತ್ತಾರೆ. ಸಾರ್ವಜನಿಕರಲ್ಲಿ ನಮ್ಮ ಪುಣ್ಯಭೂಮಿಯ ಬಗ್ಗೆ ಜಾಗೃತಿ ಮೂಡಿಸಲು ಭಾರತೀಯ ಜನತಾ ಪಕ್ಷ ನಮ್ಮ ಮಣ್ಣು, ನನ್ನ ದೇಶ ಎಂಬ ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ರಾಜ್ಯ ಸಚಿವ ಎ.ನಾರಾಯಣಸ್ವಾಮಿ ತಿಳಿಸಿದರು.

ಅವರು, ನಗರದ ಶ್ರೀವೀರಭದ್ರಸ್ವಾಮಿ ದೇವಸ್ಥಾನದ ಸಾರ್ವಜನಿಕ ರಸ್ತೆಯಲ್ಲಿ ಕೇಂದ್ರ ಸರ್ಕಾರದ ಮಹತ್ತರ ಯೋಜನೆಯಾದ ನಮ್ಮ ಮಣ್ಣು, ನಮ್ಮ ದೇಶ ಕಾರ್ಯಕ್ರಮಕ್ಕೆ ಗಿಡನೆಡುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಕರ್ನಾಟಕ ರಾಜ್ಯವೂ ಸೇರಿದಂತೆ ದೇಶದ ಎಲ್ಲೆಡೆ ಈ ಕಾರ್ಯಕ್ರಮವನ್ನು ಭಾರತೀಯ ಜನತಾ ಪಕ್ಷ ಹಮ್ಮಿಕೊಂಡಿದೆ. ಜನರಿಗೆ ಈ ನೆಲದ ಬಗ್ಗೆ ಹೆಚ್ಚಿನ ಆತ್ಮವಿಶ್ವಾಸ ಮೂಡಿಸಲು ಈ ಕಾರ್ಯಕ್ರಮ ವರವಾಗಿದೆ. ನಮ್ಮ ದೇಶದಲ್ಲಿರುವ ಅಪಾರವಾದ ನೈಸರ್ಗಿಕ ಸಂಪತ್ತು ಸಂರಕ್ಷಣೆ ಮಾಡುವ ಜೊತೆಗೆ ಸಂಸ್ಕಾರವಂತರ ಸಂಖ್ಯೆಯನ್ನು ಸಹ ಗಣನೀಯವಾಗಿ ಹೆಚ್ಚಿಸಲು ಇಂತಹ ಕಾರ್ಯಕ್ರಮ ಅವಶ್ಯಕ. ಪ್ರತಿಯೊಬ್ಬ ವ್ಯಕ್ತಿಯೂ ದೇಶ ಕಟ್ಟುವ, ಸಂರಕ್ಷಿಸುವ ಕಾರ್ಯಕ್ಕೆ ಸ್ವಯಂ ಪ್ರೇರಣೆಯಿಂದ ಕೈಜೋಡಿಸಬೇಕು ಎಂದರು. ಕಾರ್ಯಕ್ರಮದಲ್ಲಿ ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಜೆ.ಪಿ.ಜಯಪಾಲಯ್ಯ, ಜಿಲ್ಲಾ ಉಪಾಧ್ಯಕ್ಷ ಬಾಳೆಮಂಡಿರಾಮದಾಸ್, ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

### ಪ್ರೋತ್ಸಾಹಧನಕ್ಕಾಗಿ ಅರ್ಜಿ ಆಹ್ವಾನ

■ **ತುಮಕೂರು**

ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2023-24ನೇ ಶೈಕ್ಷಣಿಕ ಸಾಲಿನಲ್ಲಿ ದ್ವಿತೀಯ ಪಿಯುಸಿ/ಪದವಿ/ಸ್ನಾತಕೋತ್ತರ ಪದವಿ ಹಾಗೂ ತಾಂತ್ರಿಕ ಕೋರ್ಸ್‌ಗಳ ವಾರ್ಷಿಕ ಪರೀಕ್ಷೆಯಲ್ಲಿ ಶೇ.60ಕ್ಕಿಂತ ಹೆಚ್ಚು ಅಂಕಗಳಿಸಿದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಂದ ಪ್ರೋತ್ಸಾಹಧನಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ವಿದ್ಯಾರ್ಥಿಗಳು ಸಮಾಜ ಕಲ್ಯಾಣ ಇಲಾಖೆಯ ಪೋರ್ಟಲ್ ತಂತ್ರಾಂಶದಲ್ಲಿ ಆನ್‌ಲೈನ್ sw.kar.nic.in ಮೂಲಕ ಡಿಸೆಂಬರ್ 31, 2023ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಇಲಾಖೆಯ ಜಂಟಿನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ವಿಚ್ಛೇದನಕ್ಕೆ ಅರ್ಜಿ ಸಲ್ಲಿಸಿದ ಪತ್ನಿಗೆ ನ್ಯಾಯಾಧೀಶರ ಹಿತನುಡಿ**

# ಲೋಕಾ ಅದಾಲತ್‌ನಲ್ಲಿ ಮತ್ತೆ ಒಂದಾದ ಜೋಡಿ

» **ಚಳ್ಳಕೆರೆ**



ಸಣ್ಣ ವಿಚಾರಕ್ಕೆ ದಾಂಪತ್ಯ ಜೀವನದಲ್ಲಿ ಬಿರುಕು ಕಾಣಿಸಿಕೊಂಡು ವಿಚ್ಛೇದನಕ್ಕಾಗಿ ನ್ಯಾಯಾಲಯದ ಮೆಟ್ಟಿಲೇರಿದ್ದ ದಂಪತಿಗಳಿಗೆ ಲೋಕಾ ಅದಾಲತ್ ನಲ್ಲಿ ಬುದ್ಧಿವಾದ ಹೇಳಿ ಮತ್ತೆ ಒಂದು ಮಾಡಿದ ಘಟನೆ ಶನಿವಾರ ನ್ಯಾಯಾಲಯದ ಆವರಣದಲ್ಲಿ ನಡೆಯಿತು.

ಚಿತ್ರದುರ್ಗದ ಗಾಂಧಿನಗರದ ವಾಸಿ ಟೈಲರಿಂಗ್ ಕೆಲಸ ಮಾಡುತ್ತಿದ್ದ ನರಹರಿಸ್ವಾಮಿಯವರಿಗೆ ಅದೇ ಗ್ರಾಮದ ಸರಸ್ವತಿ ಎಂಬುವವರೊಡನೆ ಕಳೆದ ಆರು ವರ್ಷಗಳ ಹಿಂದೆ ವಿವಾಹವಾಗಿತ್ತು. ಎರಡ್ಮೂರು ವರ್ಷಗಳ ಕಾಲ ಸುಖಸಂಸಾರ ನಡೆಸಿದ ಹಿನ್ನೆಲೆಯಲ್ಲಿ ಒಂದು ಹೆಣ್ಣು ಮಗುವೂ ಸಹ ಇದೆ. ಇವರ ದಾಂಪತ್ಯದಲ್ಲಿ ಸಣ್ಣ ವಿಚಾರಕ್ಕೆ ಮನಸ್ತಾಪ ಮೂಡಿ ವಿಚ್ಛೇದನದವರೆಗೂ ಹೋಯಿತು. ಎರಡ್ಮೂರು ವರ್ಷಗಳ ಕಾಲ ಮನಸ್ತಾಪದಲ್ಲೇ ಜೀವನ ಕಳೆದ ನರಹರಿಸ್ವಾಮಿ ವಿಚ್ಛೇದನ ಪಡೆಯಲು ಚಿತ್ರದುರ್ಗ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದರು. ಚಿತ್ರದುರ್ಗ ನ್ಯಾಯಾಲಯದಿಂದ ಪ್ರಕರಣ ಚಳ್ಳಕೆರೆ ನ್ಯಾಯಾಲಯಕ್ಕೆ ವರ್ಗಾವಣೆಗೊಂಡು ವಿಚಾರಣೆ ನಡೆಯುತ್ತಿತ್ತು.

ಪ್ರಕರಣವನ್ನು ಕೈಗೆತ್ತಿಕೊಂಡ ಘನ ನ್ಯಾಯಾಲಯದ ಹಿರಿಯ ಸಿವಿಲ್ ನ್ಯಾಯಾಧೀಶರಾದ ರೇಷ್ಮ ಕಲಕಪ್ಪ ಗೋಣಿಯವರು ಶನಿವಾರ ನಡೆದ ಲೋಕಾ ಅದಾಲತ್ ನಲ್ಲಿ ಇಬ್ಬರಿಗೂ ತಿಳಿ ಹೇಳಿದರು. ಚಿಕ್ಕ ವಯಸ್ಸಿನವರು ನೀವು ಇನ್ನೂ ಬಾಳಿ, ಬದುಕು ನಡೆಸಬೇಕಿದೆ, ನಿಮ್ಮ ಮಗುವಿನ ಭವಿಷ್ಯ ರೂಪಿಸುವ ಹೊಣೆ ನಿಮ್ಮದಾಗಿದೆ ಈ ಸಂದರ್ಭದಲ್ಲಿ ಜೀನವನ್ನುಕಳೆದುಕೊಳ್ಳದೆ,ಒಬ್ಬರಿಗೊಬ್ಬರು ಸುಧಾರಣೆ ಮಾಡಿಕೊಂಡು ಜೀವನ ನಡೆಸಿ ಎಂದು ಬುದ್ದಿವಾದ ಹೇಳಿದ ನಂತರ ಇಬ್ಬರ ಮನಸ್ತಾಪ ಮುರಿದು ಒಂದಾಗುವ ಭರವಸೆ ನೀಡಿದರು. ಇದಕ್ಕೆ ಸಮ್ಮತಿಸಿದ ನ್ಯಾಯಾಧೀಶರು ಇತರರಿಗೆ ಮಾದರಿಯಾಗಬೇಕು ಎಂದು ನ್ಯಾಯಾಲಯದಲ್ಲಿ ಒಂದಾದ ದಂಪತಿಗಳಿಗೆ ಹೂವಿನ ಹಾರ ಬದಲಿಸಿ, ಸಿಹಿ ನೀಡಿ, ಉತ್ತಮ ಜೀವನ ನಡೆಸುವಂತೆ ಹೇಳಿಕಳಿಸಿದರು. ನ್ಯಾಯಾಲಯ ಯಾವ ಸಂದರ್ಭದಲ್ಲೂ ಪತಿ, ಪತ್ನಿಯನ್ನು ಬೇರೆ ಮಾಡಲು ಬಯಸುವುದಿಲ್ಲ.

ನಿಮ್ಮೊಂದಿಗೆ ಹತ್ತಾರು ಬಾರಿ ಸಂದಾನ ನಡೆಸುತ್ತೇವೆ. ನೀವು ಒಂದಾದರೆ ಹೊಸ ಬದುಕನ್ನೇ ರೂಪಿಸಿಕೊಳ್ಳಬಹುದಾಗಿದೆ. ಇಂದು ನಡೆದ ಸಂದಾನ ವಿಚ್ಛೇದನದ ಬಯಸುವ ಎಲ್ಲರಿಗೂ ಮಾದರಿಯಾಗಬೇಕು. ಸಂಸಾರದಲ್ಲಿ ಬರುವ ಸಮಸ್ಯೆಗಳನ್ನು ಸುಧಾರಿಸಿಕೊಂಡು ಹೋದರೆ ಸುಖ ಸಂಸಾರಕ್ಕೆ ದಾರಿಯಾಗಲಿದೆ ಎಂದರು.

ನರಹರಿಸ್ವಾಮಿಯ ಪರ ವಕೀಲ ಕೆ.ಎಂ.ನಾಗರಾಜು, ಸರಸ್ವತಿ ಪರ ವಕೀಲ ಮಂಜುನಾಥ ನ್ಯಾಯಾಧೀಶರ ಅನಿಸಿಕೆಗಳ ಬಗ್ಗೆ ಇಬ್ಬರಿಗೂ ತಿಳಿ ಹೇಳಿ ಮಗುವಿನ ಹಿತದೃಷ್ಟಿಯಿಂದ ಅರ್ಜಿಯನ್ನು ವಾಪಾಸ್ ಪಡೆದು ಒಂದಾಗಿ ಹೋಗುವಂತೆ ಹೇಳಿದ ಹಿನ್ನೆಲೆಯಲ್ಲಿ ವಿಚ್ಛೇದನ ಅರ್ಜಿಯನ್ನು ವಾಪಾಸ್ ಪಡೆದು ಗಂಡ-ಹೆಂಡತಿ ಉತ್ತಮ ಸಂಸಾರ ನಡೆಸುವ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ವಕೀಲರಾದ ಮಧುಮತಿ, ಆರ್.ಪೆನ್ನಯ್ಯ, ಗುರುಮೂರ್ತಿ, ರಾಮಚಂದ್ರಪ್ಪ, ಮುಂತಾದವರು ಉಪಸ್ಥಿತರಿದ್ದರು.

# ಸೇವಾ ಮನೋಭಾವದಿಂದ ರೋಗಿಗಳ ಹಾರೈಕೆ ಮಾಡಿ: ಕೆ.ಸಿ.ವೀರೇಂದ್ರ ಪಪ್ಪಿ

» **ಚಿತ್ರದುರ್ಗ**



ಸೇವಾ ಮನೋಭಾವನೆಯಿಂದ ರೋಗಿಗಳ ಹಾರೈಕೆ ಮಾಡಿದಾಗ ಮನಸ್ಸಿಗೆ ಸಮಾಧಾನ ಸಿಗುವುದರ ಜೊತೆಗೆ ದೇವರು ಮೆಚ್ಚುತ್ತಾನೆಂದು ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಹೇಳಿದರು.

ದೇವರಾಜ ಅರಸ್ ಶಿಕ್ಷಣ ಸಂಸ್ಥೆಯಲ್ಲಿ ಸೋಮವಾರ ನಡೆದ ಎಸ್.ಎಲ್.ವಿ. ಸ್ಕೂಲ್ ಅಂಡ್ ನರ್ಸಿಂಗ್ ಕಾಲೇಜಿನ ಇಪ್ಪತ್ತೈದನೆ ವರ್ಷದ ಬೆಳ್ಳಿ ಮಹೋತ್ಸವ ಉದ್ಘಾಟಿಸಿ ಮಾತನಾಡಿದರು.

ಕಳೆದ 25 ವರ್ಷಗಳಿಂದ ದೇವರಾಜ್ ಅರಸ್ ಶಿಕ್ಷಣ ಸಂಸ್ಥೆ ಅನೇಕ ಏಳುಬೀಳುಗಳನ್ನು ಕಂಡಿದೆ. ಈಗ ಅದರ ಸಾರಥಿಯಾಗಿ ಯುವ ಉತ್ಸಾಹಿ ಸಂಸ್ಥೆಯ ಸಿ.ಇ.ಓ. ರಘುಚಂದನ್ ಮುನ್ನಡೆಸಿಕೊಂಡು ಹೋಗುತ್ತಿದ್ದಾರೆ. ರೋಗಿಗಳ ಜೊತೆಗೆ ವೈದ್ಯರಿಗಿಂತಲೂ ನ▯▯▯▯ಗಳು ಹೆಚ್ಚಿನ ಸಮಯ ಕಳೆಯುತ್ತಾರೆ. ನರ್ಸಿಂಗ್ ವೃತ್ತ ಅತ್ಯಂತ ಪವಿತ್ರವಾದುದು. ಪ್ರಾಣ ಉಳಿಸುವುದರ ಜೊತೆ ಆತ್ಮವಿಶ್ವಾಸ ತುಂಬುವ ಅಮೂಲ್ಯವಾದ ಸೇವೆ. ಇಲ್ಲಿ ನರ್ಸಿಂಗ್ ಶಿಕ್ಷಣ ಪಡೆದವರು ದೇಶ-ವಿದೇಶಗಳಲ್ಲಿ ಕೆಲಸ ಮಾಡುತ್ತಿರುವುದು ಸಂತೋಷದ ಸಂಗತಿ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಂಸ್ಥೆಯ ಸಂಸ್ಥಾಪಕ ಕಾರ್ಯದರ್ಶಿ ಹಾಗೂ ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಮಾತನಾಡಿ ಇಪ್ಪತ್ತೈದು ವರ್ಷಗಳಿಂದ ಎಸ್.ಎಲ್.ವಿ. ನರ್ಸಿಂಗ್ ಕಾಲೇಜಿನಲ್ಲಿ ಹತ್ತು ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ತರಬೇತಿ ಪಡೆದು ಸ್ವಾವಲಂಭಿಯಾಗಿ ಬದುಕು ಕಟ್ಟಿಕೊಂಡಿದ್ದಾರೆ. ಪ್ರಪಂಚದ ಯಾವುದೇ ಮೂಲೆಗೆ ಹೋದರು ನಮ್ಮ ಸಂಸ್ಥೆಯಲ್ಲಿ ನರ್ಸಿಂಗ್ ಶಿಕ್ಷಣ ಪಡೆದವರು ಸಿಗುತ್ತಾರೆ. ವೈದ್ಯರಿಗಿಂತ ನಿಮ್ಮ ಸೇವೆ ಅಮೂಲ್ಯವಾದುದು. ಅದಕ್ಕಾಗಿ ನಿಮ್ಮ ಮೇಲೆ ತೋರುವ ಪ್ರೀತಿ, ವಿಶ್ವಾಸ ವೈದ್ಯರ ಮೇಲೆ ಇರುವುದಿಲ್ಲ. ಆರೋಗ್ಯ ಪೂರ್ಣ ಸಮಾಜಕ್ಕಾಗಿ ನಿಮ್ಮ ಪಾತ್ರ ದೊಡ್ಡದು. ಬೇರೆ ಯಾರಿಗೂ ಇಂತಹ ಅವಕಾಶ ಸಿಗುವುದಿಲ್ಲ. ಲಾಭದ ನಿರೀಕ್ಷೆಯಿಂದ ಸಂಸ್ಥೆ ಕಟ್ಟಿಲ್ಲ. ಸಾವಿರಾರು ವಿದ್ಯಾರ್ಥಿಗಳು ಇಲ್ಲಿ ಶಿಕ್ಷಣ ಪಡೆದು ಹೊರ ಹೋಗಿದ್ದಾರೆ. ಗುಣಮಟ್ಟದ ಸೇವೆ ನೀಡಿ ಜೀವನ ಸಾರ್ಥಕಪಡಿಸಿಕೊಳ್ಳಿ ಎಂದು ನರ್ಸಿಂಗ್ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಸಿ.ಇ.ಓ. ಎಂ.ಸಿ.ರಘುಚಂದನ್ ಮಾತನಾಡುತ್ತ ಒಂದು ಕಾಲದಲ್ಲಿ ಚಿತ್ರದುರ್ಗದಲ್ಲಿ ದೊಡ್ಡ ಸಂಸ್ಥೆ ಯಾವುದು ಎಂದರೆ ಎಸ್.ಜೆ.ಎಂ.ವಿದ್ಯಾಪೀಠ ಎನ್ನುತ್ತಿದ್ದರು. ಈಗ ದೇವರಾಜ್ ಅರಸ್ ಶಿಕ್ಷಣ ಸಂಸ್ಥೆ ಕೂಡ ಎಸ್.ಜೆ.ಎಂ.ವಿದ್ಯಾಪೀಠದಂತೆ ದೊಡ್ಡ ಸಂಸ್ಥೆಯಾಗಿ ಬೆಳೆದಿರುವುದರ ಹಿಂದೆ ಅನೇಕರ ಪರಿಶ್ರಮ ನಿದ್ದೆಯಿಲ್ಲದ ಕನಸುಗಳಿವೆ. ಶಿಕ್ಷಕ ವೃಂದ ಹಾಗೂ ಸಿಬ್ಬಂದಿಗಳೆ ಸಂಸ್ಥೆ ಈ ಮಟ್ಟಕ್ಕೆ ಬೆಳೆಯಲು ಕಾರಣಕರ್ತರು ಎಂದು ಕೃತಜ್ಞತೆಗಳನ್ನು ಸಲ್ಲಿಸಿದರು. ನಮ್ಮ ಸಂಸ್ಥೆಯಲ್ಲಿ ಐದು ಸಾವಿರ ಮಕ್ಕಳಿದ್ದಾರೆಂದರೆ ಅಡಿಪಾಯ, ನಂಬಿಕೆ, ವಿಶ್ವಾಸ, ಅತ್ಯುನ್ನತ ಶ್ರೇಣಿಯ ಫಲಿತಾಂಶವೇ ಮೂಲ ಕಾರಣ. ಪ್ರಸನ್ನ, ಕರಿಯಣ್ಣ, ಅನಂತರಾಜು, ಮಹಾತೇಂಶ ಇವರುಗಳ ಪರಿಶ್ರಮವನ್ನು ಸ್ಮರಿಸಿದ ಎಂ.ಸಿ.ರಘುಚಂದನ್ ಅದೆಷ್ಟು ಬಾರಿ ಕಡತಗಳನ್ನು ಹಿಡಿದು ಬೆಂಗಳೂರು, ದೆಹಲಿಗೆ ಓಡಾಡಿದ್ದಾರೆಂದರೆ ಹೇಳತೀರದು ಎಂದರು.

ನಮ್ಮ ಸಂಸ್ಥೆಯಲ್ಲಿ ನರ್ಸಿಂಗ್ ಶಿಕ್ಷಣ ಪಡೆದವರು ಲಂಡನ್, ಯು.ಎಸ್.ಎ. ಆಸ್ಟ್ರೇಲಿಯಾದಲ್ಲಿದ್ದಾರೆ. ನರ್ಸಿಂಗ್ ಕೆಲಸ ಎನ್ನುವುದು ಸೇವಾ ಮನೋಭಾವ, ಪುಣ್ಯ ಸಾರ್ಥಕವಾದುದು. ಕೇರ್ ಮತ್ತು ಸಿಂಪತಿಯಿಂದ ರೋಗಿಯನ್ನು ಆರೈಕೆ ಮಾಡಿದರೆ ಅರ್ಧ ಕಾಯಿಲೆ ವಾಸಿಯಾಗುತ್ತದೆ. ಇಪ್ಪತ್ತೈದು ವರ್ಷಗಳಿಂದ ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಏಳಿಗೆಗೆ ದುಡಿದ ಕಾಣದ ಕೈಗಳಿಗೆ ಋಣಿಯಾಗಿರುತ್ತೇನೆ. ಬಡವರು, ನಿರ್ಗತಿಕರಿಗೆ ಸುಲಭವಾಗಿ ಶಿಕ್ಷಣ ಸಿಗಲಿ ಎನ್ನುವ ಕಳಕಳಿಯಿಂದ ಸಂಸ್ಥೆ ಕಟ್ಟಲಾಗಿದೆ ಎಂದರು.

# ಸಸ್ಯ ಶ್ಯಾಮಲಾ, ಪ್ರಕೃತಿಗೆ ಋಣ ಸಂದಾಯ



» **ದಾವಣಗೆರೆ**

ಸರ್ಕಾರದ ಮಹತ್ವದ ಯೋಜನೆಯಾದ ಸಸ್ಯಶ್ಯಾಮಲಾ ಕೂಡ ಪರಸ್ಪರರ ಪಾಲ್ಗೊಳ್ಳುವಿಕೆಯಿಂದ ಶಾಲಾ ಆವರಣವನ್ನು ಹಸಿರು ಮಯ ಮಾಡಲು ಮತ್ತು ಆ ಮೂಲಕ ಸಮಾಜಕ್ಕೆ ಋಣ ಸಂದಾಯವನ್ನೂ ಮಾಡಬೇಕಿದೆ ಎಂದು ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಜಿ.ಕೊಟ್ರೇಶ್ ತಿಳಿಸಿದರು.ಸೋಮವಾರ ನಗರದ ಮೋತಿ ವೀರಪ್ಪ ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರೌಢಶಾಲಾ ಆವರಣದಲ್ಲಿ ನಡೆದ ಸಸ್ಯಶ್ಯಾಮಲಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.ಸರ್ಕಾರದ ವೈವಿಧ್ಯಮಯ ಕಾರ್ಯಕ್ರಮಗಳ ಅನುಷ್ಠಾನಗಳಿಂದಾಗಿ ಸರ್ಕಾರಿ ಶಾಲೆಗಳ ಮಕ್ಕಳ ಮನೋವಿಕಾಸ ವಿಶಾಲವಾಗುತ್ತಿದೆ. ಶಾಲೆಯ ಶಿಕ್ಷಕರು, ಮಕ್ಕಳು ಮತ್ತು ಶಾಲಾಭಿವೃದ್ಧಿ ಸಮಿತಿ ಸದಸ್ಯರು ಗಳೆಲ್ಲರ ಕ್ರಿಯಾಶೀಲ ಪಾಲ್ಗೊಳ್ಳುವಿಕೆಯಿಂದ ಶಾಲೆಗಳು ಅಭಿವದ್ಧಿಯತ್ತ ಸಾಗುತ್ತಿವೆ. ಈ ಕಾರ್ಯಕ್ರಮವನ್ನು ಜಿಲ್ಲೆಯ ಎಲ್ಲಾ ಶಾಲೆಗಳಲ್ಲಿ ಕ್ರಿಯಾಶೀಲವಾಗಿ ಅನುಷ್ಠಾನಗೊಳಿಸಲಾಗುವುದು ಎಂದು ಹೇಳಿದರು.ಉತ್ತರ ವಲಯದ ಕ್ಷೇತ್ರಶಿಕ್ಷಣಾಧಿಕಾರಿ ಪುಷ್ಪಲತಾ ಮಾತನಾಡಿ, ಎಸ್.ಡಿ.ಎಮ್.ಸಿ.ಸದಸ್ಯರು, ಶಾಲಾ ಶಿಕ್ಷಕರು ಮತ್ತು ಮಕ್ಕಳು ಈ ಮೂರೂ ಅಂಗಗಳ ಸಹಭಾಗಿತ್ವದಲ್ಲಿ ನಡೆಯುವ ಸಸ್ಯಶ್ಯಾಮಲಾ ಕಾರ್ಯಕ್ರಮ ಯಶಸ್ವಿಯಾಗಲಿ. ಆ ಮೂಲಕ ಗಿಡ ಬೆಳೆಸುವ, ಸಂರಕ್ಷಿಸಿ, ಪೊರೆಯುವ ಪ್ರಕೃತಿಯ ಪಾಠಗಳನ್ನು ಮಕ್ಕಳು ಕಲಿಯುವಂತೆ ಪ್ರೇರೇಪಿಸಿ ಎಂದು ಕರೆ ನೀಡಿದರು.ಶಾಲಾಭಿವೃದ್ಧಿ ಸಮಿತಿಯ ಪವನಜಯ, ರೇವಣಸಿದ್ದಪ್ಪ ಹಾಗೂ ಸಿಬ್ಬಂದಿ ಸೇರಿದಂತೆ ಇತರರು ಇದ್ದರು.ಕಾರ್ಯಕ್ರಮದಲ್ಲಿ ಉಪಪ್ರಾಂಶುಪಾಲೆ ಕಲ್ಪಿತರಾಣಿ ಸ್ವಾಗತಿಸಿದರೆ, ಹಿರಿಯ ಶಿಕ್ಷಕ ಮಹದೇವಪ್ಪ ಕಾರ್ಯಕ್ರಮವನ್ನು ನಿರೂಪಿಸಿದರು. ಶಾಲಾ ಶಿಕ್ಷಕರು, ಸಿಬ್ಬಂದಿಗಳು ಹಾಗೂ ಮಕ್ಕಳು ಭಾಗವಹಿಸಿದ್ದರು.

**ಪ್ರಮುಖ ಸುದ್ದಿ**

# ಪತ್ರಕರ್ತರ ಸಮಸ್ಯೆಗೆ ಪರಿಹಾರ ಒದಗಿಸಲು ರಾಜ್ಯ ಸರ್ಕಾರಕ್ಕೆ ಮನವಿ: ಶಾಸಕ ಟಿ.ರಘುಮೂರ್ತಿ ಅಭಯ

» **ಚಳ್ಳಕೆರೆ**



ಪತ್ರಿಕಾ ರಂಗದಿಂದ ಇಂದು ಜನರಿಗೆ ಸರ್ಕಾರದ ಸವಲತ್ತು ಸೇರಿದಂತೆ ಅನೇಕ ಸೌಲಭ್ಯ ಪಡೆಯಲು ಸಹಾಯವಾಗಿದೆ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ರೋಟರಿ ಬಾಲಭವನದಲ್ಲಿ ಭಾನುವಾರ ಕರ್ನಾಟಕ ಮಾಧ್ಯಮ ಮಹಾಒಕ್ಕೂಟ ಬೆಂಗಳೂರು ಮತ್ತು ಚಿತ್ರದುರ್ಗ, ದಾವಣಗೆರೆ ಜಿಲ್ಲಾ ಘಟಕಗಳ ಮಾಧ್ಯಮ ಮಹಾಒಕ್ಕೂಟದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಗಡಿನಾಡು ಪತ್ರಕರ್ತರ ಒಂದುದಿನದ ಕಾರ್ಯಗಾರನ್ನು ಉದ್ಘಾಟಿಸಿ ಮಾತನಾಡಿದರು. ನನ್ನ ವ್ಯಾಪ್ತಿಯಲ್ಲಿ ಪತ್ರಕರ್ತರಿಗೆ ನಿವೇಶನ, ಪತ್ರಿಕಾ ಭವನ, ಇನ್ಸ್‌ರೆನ್ಸ್ ಸೇರಿದಂತೆ ಹಲವಾರು ಸೌಲಭ್ಯ ಒದಗಿಸಲು ಸಿದ್ದನಿದ್ದೇನೆ. ಹಂತ, ಹಂತವಾಗಿ ಪತ್ರಕರ್ತರಿಗೆ ನೆರವಾಗುತ್ತೇನೆ. ರಾಜ್ಯಮಟ್ಟದಲ್ಲೂ ಸಹ ಪತ್ರಕರ್ತರ ಸಮಸ್ಯೆಯನ್ನು ನಿವಾರಣೆ ಮಾಡಲು ಸರ್ಕಾರಕ್ಕೆ ಮನವಿ ಮಾಡುವೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಮಾದ್ಯಮ ಮಹಾಒಕ್ಕೂಟದ ರಾಜ್ಯಪ್ರಧಾನ ಕಾರ್ಯದರ್ಶಿ ಡಿ.ಈಶ್ವರಪ್ಪ, ಪ್ರತಿನಿತ್ಯ ಸುದ್ದಿ ಸಂಗ್ರಹಿಸಲು ಪತ್ರಕರ್ತರು ಬೇರೆ, ಬೇರೆ ಸ್ಥಳಗಳಿಗೆ ಓಡಾಡಬೇಕಾಗಿದೆ. ಆರ್ಥಿಕವಾಗಿ ಪತ್ರಕರ್ತರು ಹಿಂದುಳಿದ್ದಾರೆ, ಅವರಿಗೆ ಯಾವುದೇ ಸೌಲಭ್ಯವಿಲ್ಲದಿದ್ದರೂ ಸಮಾಜ ಹಿತಕ್ಕಾಗಿ ಕಾರ್ಯನಿರ್ವಹಿಸುತ್ತಾರೆ, ಶಾಸಕರು ಉಚಿತ ಬಸ್ ಪಾಸ್, ನಿವೇಶನ, ಪತ್ರಿಕಾಭವನ ಹಾಗೂ ಇನ್ನಿತರೆ ಸೌಲಭ್ಯಗಳನ್ನು ಒದಗಿಸಬೇಕೆಂದರು.

ಭ್ರಷ್ಟಾಚಾರ ಮತ್ತು ಕಾನೂನು ಅರಿವಿನ ಬಗ್ಗೆ ಉಪನ್ಯಾಸ ನೀಡಿದ ಲೋಕಾಯುಕ್ತ ಎಸ್ಪಿ ಆರ್.ಎನ್.ವಾಸುದೇವ್, ಲೋಕಾಯುಕ್ತ ಇರುವುದೇ ಭ್ರಷ್ಟರನ್ನು ಶಿಕ್ಷಿಸಲು, ಲೋಕಾಯುಕ್ತಕ್ಕೆ ಬಂದ ಯಾವುದೇ ದೂರನ್ನು ಅಲಕ್ಷಿಸದೆ ಅವುಗಳ ಬಗ್ಗೆ ವಿಶೇಷ ಗಮನ ನೀಡಲಾಗುತ್ತದೆ. ಸಾರ್ವಜನಿಕರು ನಿರ್ಭಿತಿಯಿಂದ ಭ್ರಷ್ಟಾಚಾರ ಯಾವುದೇ ಮಾಹಿತಿ ಇದ್ದರೂ ಕಚೇರಿಗೆ ಬಂದು ದೂರು ನೀಡಿ ಎಂದು ಮನವಿ ಮಾಡಿದರು.

ನ್ಯೂಸ್ ಪೇಪರ್ ಅಸೋಷಿಯೇಷನ್ ಇಂಡಿಯಾ ರಾಜ್ಯಾಧ್ಯಕ್ಷ ಬಿ.ವಿ.ವಾಸುದೇವ ಗಡಿನಾಡು ಪತ್ರಕರ್ತರ ಸಮಸ್ಯೆಗಳ ಕುರಿತು ಮಾತನಾಡಿ, ರಾಜ್ಯದಲ್ಲಿ ಆಡಳಿತ ನಡೆಸಿದ ವಿವಿಧ ಪಕ್ಷಗಳು ಪತ್ರಕರ್ತರ ಮೂಲ ಸಮಸ್ಯೆಗಳಿಗೆ ಪರಿಹಾರವನ್ನು ನೀಡುವಲ್ಲಿ ವಿಫಲವಾಗಿವೆ. ಪತ್ರಕರ್ತರ ಸಾಮಾನ್ಯ ಬೇಡಿಕೆಗಳ ಬಗ್ಗೆಯೂ ಸಹ ಗಮನಹರಿಸುತ್ತಿಲ್ಲ. ರಾಜ್ಯದಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ಆಡಳಿತ ನಡೆಸುತ್ತಿದ್ದು, ಮಾನ್ಯ ಶಾಸಕರು ವಿಧಾನಸಭೆಯಲ್ಲಿ ಸರ್ಕಾರವನ್ನು ಎಚ್ಚರಿಸಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರಾಜ್ಯಾಧ್ಯಕ್ಷ ಕೆ.ಶಿವಕುಮಾರ್ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ರಾಷ್ಟ್ರೀಯ, ರಾಜ್ಯ ಮತ್ತು ಕೆಲವು ಕೆಲ ಪತ್ರಕರ್ತರು ಮಾತ್ರ ಸೌಲಭ್ಯ ಪಡೆಯುತ್ತಿದ್ದಾರೆ. ಗ್ರಾಮೀಣ ಮತ್ತು ಗಡಿಭಾಗದ ಪತ್ರಕರ್ತರು ಸೌಲಭ್ಯವಿಲ್ಲದಿದ್ದರೂ ಆತ್ಮವಿಶ್ವಾಸದಿಂದ ಕಾರ್ಯನಿರ್ವಹಿಸುತ್ತಾರೆ. ಇಂತಹವರ ಬಗ್ಗೆ ಸಮಾಜ ಸಹನುಭೂತಿ ಹೊಂದಬೇಕಲ್ಲದೆ ಸರ್ಕಾರದ ಮೇಲೆ ಒತ್ತಡ ಹೇರಬೇಕು. ಸಂದರ್ಭಬಂದರೆ ಶಾಸಕರೂ ಸಹ ನಮ್ಮೊಂದಿಗೆ ಹೋರಾಟ ನಡೆಸಬೇಕು ಎಂದರು. ಜಿಲ್ಲಾಧ್ಯಕ್ಷ ಅನಂತಮೂರ್ತಿನಾಯಕ್ ಮಾತನಾಡಿದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸಿದ ವಕೀಲರ ಸಂಘ ಜಿಲ್ಲಾಧ್ಯಕ್ಷ ವೈ.ತಿಪ್ಪೇಸ್ವಾಮಿ, ನಾಗರಾಜಕಟ್ಟೆ, ಚಂದ್ರಶೇಖಗುಪ್ತ,ಚೌಳೂರುಮಂಜುನಾಥ, ಮೌನೇಶ್‌ಚಾರ್, ಡಾ.ಬಿ.ಚಂದ್ರನಾಯ್ಕ, ಸವಿತಾಮಲ್ಲೇಶ್‌ನಾಯ್ಕರವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ನಿವೃತ್ತ ಪ್ರಾಂಶುಪಾಲ ಪಿ.ಎಚ್. ಜಯಪ್ಪ, ಹಿರಿಯ ಪತ್ರಕರ್ತರಾದ ಬಿ.ತಿಪ್ಪಣ್ಣಮರಿಕುಂಟೆ ಉಪಸ್ಥಿತರಿದ್ದರು.


Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T